ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 307 ₹ 4, SUNDAY, 04 FEBRUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

ಭಾರತ ರತ್ನ ನನ್ನ ಜೀವಮಾನದ ಆದರ್ಶಗಳಿಗೆ ಸಂದ ಗೌರವ: ಎಲ್‌ಕೆ ಅಡ್ವಾಣಿ



ದೆಹಲಿ: 'ಭಾರತ ರತ್ನ ಪ್ರಶಸ್ತಿ' ನನ್ನ ಜೀವಮಾನದ ಆದರ್ಶಗಳಿಗೆ ಸಂದ ಗೌರವ ಎಂದು ಬಿಜೆಪಿ ಹಿರಿಯ ನಾಯಕ ಎಲ್.ಕೆ.ಅಡ್ವಾಣಿ ಹೇಳಿದ್ದಾರೆ.

ಭಾರತ ರತ್ನ ನೀಡುವ ಕೇಂದ್ರ ಸರಕಾರದ ನಿರ್ಧಾರಕ್ಕೆ ಕೃತಜ್ಞತೆ ಸಲ್ಲಿಸಿದ ಬಿಜೆಪಿ ಹಿರಿಯ ನಾಯಕ ಪ್ರತಿಕ್ರಿಯೆ ನೀಡಿದ ಎಲ್.ಕೆ. ಅಡ್ವಾಣಿ, ತಮ್ಮ ಆದರ್ಶಗಳು ಮತ್ತು ತತ್ವಗಳಿಗೆ ಇದು 'ಗೌರವ' . ಇಂದು ನನಗೆ ನೀಡಲಾದ ಭಾರತ ರತ್ನವನ್ನು ನಾನು ಅತ್ಯಂತ ನಮ್ರತೆ ಮತ್ತು ಕೃತಜ್ಞತೆಯಿಂದ ಸ್ವೀಕರಿಸುತ್ತೇನೆ ಎಂದಿದ್ದಾರೆ. ಇದು ಒಬ್ಬ ವ್ಯಕ್ತಿಯಾಗಿ ನನಗೆ ಮಾತ್ರವಲ್ಲ, ನನ್ನ ಜೀವನದುದ್ದಕ್ಕೂ ನನ್ನ ಸಾಮರ್ಥ್ಯಕ್ಕೆ ತಕ್ಕಂತೆ ಸೇವೆ ಸಲ್ಲಿಸಲು ಶ್ರಮಿಸಿದ ಆದರ್ಶಗಳು ಮತ್ತು ತತ್ವಗಳಿಗೆ ಸಂದ ಗೌರವವಾಗಿದೆ ಎಂದಿದ್ದಾರೆ. ತಮಗೆ ಭಾರತ ರತ್ನ ಪ್ರಶಸ್ತಿ ನೀಡಿದ್ದಕ್ಕಾಗಿ ಅಡ್ವಾಣಿ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ ಅರ್ಪಿಸಿದರು.

'ನನ್ನ ಕುಟುಂಬದ ಎಲ್ಲಾ ಸದಸ್ಯರ ಬಗ್ಗೆ, ವಿಶೇಷವಾಗಿ ನನ್ನ ಪ್ರೀತಿಯ ಅಗಲಿದ ಪತ್ನಿ ಕಮಲಾ ಅವರ ಬಗ್ಗೆ ನನ್ನ ಆಳವಾದ ಭಾವನೆಗಳನ್ನು ವ್ಯಕ್ತಪಡಿಸುತ್ತೇನೆ. ಅವರು ನನ್ನ ಜೀವನದಲ್ಲಿ ಶಕ್ತಿ ಮತ್ತು ಸುಸ್ಥಿರತೆಯ ದೊಡ್ಡ ಮೂಲವಾಗಿದ್ದಾರೆ' ಎಂದು ಅವರು ಹೇಳಿದರು.

ಗ್ಯಾರಂಟಿ ಯೋಜನೆಗಳನ್ನು ಪತ್ರಕರ್ತರು ಬಿಟ್ಟಿ ಎಂದು ಕರೆಯಬಾರದು: ಸಿಎಂ ಸಿದ್ದರಾಮಯ್ಯ

ದಾವಣಗೆರೆ: ಮೌಢ್ಯ, ಕಂದಾಚಾರ, ಕರ್ಮಸಿದ್ಧಾಂತವನ್ನು ಪತ್ರಕರ್ತರು ತಿರಸ್ಕರಿಸಿ ಜನರಿಗೆ ಸತ್ಯ ಹೇಳುವ ಧೈರ್ಯ ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಸಲಹೆ ನೀಡಿದ್ದಾರೆ.

ದಾವಣಗೆರೆಯಲ್ಲಿ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಪತ್ರಕರ್ತರಿಗೆ ರಾಜಕೀಯ ಬೇಕಾಗಿಲ್ಲ. ವಸ್ತುನಿಷ್ಠವಾಗಿ ಇರಬೇಕು. ನಾಡಿನ ಬಡವರು ಮತ್ತು ಮಧ್ಯಮ ವರ್ಗದವರ ಆರ್ಥಿಕ ಶಕ್ತಿ ಹೆಚ್ಚಿಸುವ ಗ್ಯಾರಂಟಿ ಯೋಜನೆಗಳನ್ನು ಪತ್ರಕರ್ತರು ಬಿಟ್ಟಿ ಗ್ಯಾರಂಟಿ ಎಂದು ಕರೆಯಬಾರದು. ಪಕ್ಷಾತೀತವಾಗಿ, ಜಾತ್ಯತೀತವಾಗಿ, ಧರ್ಮಾತೀತವಾಗಿ ಇರುವ ಈ ಯೋಜನೆಯನ್ನು ಬಿಟ್ಟಿ ಗ್ಯಾರಂಟಿ ಎಂದು ಕರೆಯದೆ. ನೀವೇ ಪರಿಶೀಲಿಸಿ ಬರೆಯಿರಿ. ಏನನ್ನಾದರೂ ಪ್ರಕಟಿಸುವ ಮೊದಲು ಪರಿಶೀಲನೆ ನಡೆಸಬೇಕು ಎಂದರು.

ಪಟ್ಟಭದ್ರರನ್ನು ಗುರುತಿಸಿ ಮಟ್ಟ ಹಾಕುವ ನಿಷ್ಠುರತೆಯನ್ನು ಪತ್ರಕರ್ತರು ಬೆಳೆಸಿಕೊಳ್ಳಬೇಕು. ಗಂಡ-ಹೆಂಡತಿ ಜಗಳವನ್ನು ಇಡೀ ದಿನ ತೋರಿಸುವುದಕ್ಕಿಂತ, ಸಮಾಜದ ಬೆಳವಣಿಗೆಗೆ ಅಡ್ಡಿ ಆಗಿರುವ ಪಟ್ಟಭದ್ರರನ್ನು ಗುರುತಿಸಿ ಬರೆಯಿರಿ. ಇದರಿಂದ ಸಮಾಜಮುಖಿ ಪತ್ರಕೋದ್ಯಮ ಸಾಧ್ಯ ಎಂದು ಸಿಎಂ ಸಿದ್ದರಾಮಯ್ಯ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಹಣವಂತರು, ಅತೀ ಶ್ರೀಮಂತರ ಕೈಯಲ್ಲಿ ಪತ್ರಿಕೋದ್ಯಮ ಸಿಲುಕಿದೆ. ಹೀಗಾಗಿ ಶ್ರೀಮಂತರ ಹಿತಾಸಕ್ತಿ ಕಾಯುವ, ಬಡವರ ಹಿತಾಸಕ್ತಿಗೆ ವಿರುದ್ಧವಾಗಿ ಬರೆಯುವ ಅಪಾಯ ಇರುತ್ತದೆ. ಇದನ್ನು ಪರಿಶೀಲಿಸಿಕೊಳ್ಳಿ. ನಾನು ಅಭಿವ್ಯಕ್ತಿ ಸ್ವಾತಂತ್ರ್ಯದ ಪರವಾಗಿ ಇರುವವನು, ಬೆಂಬಲಿಸುವವನು. ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಘನತೆ ತರುವಂತೆ ಮಾಡಬೇಕು ಎಂದರು.

ಸ್ವಾತಂತ್ರ್ಯಪೂರ್ವದ ಪತ್ರಿಕೋದ್ಯಮದಲ್ಲಿ ದೇಶಕ್ಕೆ ಸ್ವಾತಂತ್ರ್ಯ ತರಬೇಕು ಎನ್ನುವ ಆಶಯ ಪ್ರಧಾನವಾಗಿ ಕೆಲಸ ಮಾಡಿತ್ತು. ಸ್ವಾತಂತ್ರ್ಯ ನಂತರ ಪ್ರಜಾಪ್ರಭುತ್ವವನ್ನು ಕಾಯುವ, ರಕ್ಷಿಸುವ ಆಶಯ ಪ್ರಮುಖವಾಗಿದೆ.

ಜನ ಸಾಮಾನ್ಯರು ಪತ್ರಿಕಾವೃತ್ತಿ ಮೇಲೆ ಬಹಳ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಆ ನಿರೀಕ್ಷೆಗಳು ಹುಸಿಯಾಗದಂತೆ ಪತ್ರಕರ್ತರು ವೃತ್ತಿಪರತೆ ಬೆಳೆಸಿಕೊಳ್ಳಬೇಕು. ಈಗ ತಂತ್ರಜ್ಞಾನ, ವಿಜ್ಞಾನ ಬಹಳ ಬೆಳೆದಿದ್ದು, ಇದರ ಪ್ರಯೋಜನವನ್ನು ಪತ್ರಿಕಾವೃತ್ತಿ ಬಳಸಿಕೊಳ್ಳಬೇಕಿದೆ. ಆದರೆ ಸತ್ಯನಿಷ್ಠೆಯನ್ನು ಯಾವುದೇ ಕಾರಣಕ್ಕೂ ಪತ್ರಕರ್ತರು ಬಿಡಬಾರದು ಎಂದರು.

ಪತ್ರಿಕಾವೃತ್ತಿ ಸಮಾಜದ ಅಸಮಾನತೆ ಹೋಗಲಾಡಿಸಲು, ಅವಕಾಶ ವಂಚಿತರ ಪರವಾಗಿ, ಮೀಸಲಾತಿಯ ಆಶಯಗಳ ಪರವಾಗಿ ಇರಬೇಕು. ಇದರಿಂದ ಸಾಮಾಜಿಕ ನ್ಯಾಯಯನ್ನು ಧ್ವನಿ ಇಲ್ಲದವರಿಗೆ ಕೊಡಲು ಸಾಧ್ಯ. ಹೀಗಾದಾಗ ಬಸವಣ್ಣನವರ ಸಮ ಸಮಾಜದ ಆಶಯ ಈಡೇರಲು ಸಾಧ್ಯ. ಪತ್ರಕರ್ತರು ಇದಕ್ಕೆ ಪೂರಕವಾಗಿ ವಸ್ತುನಿಷ್ಠವಾಗಿ ಕೆಲಸ ಮಾಡಬೇಕು. ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಕೊಡುವ ಬಗ್ಗೆ ಗಂಭೀರವಾಗಿ ಪರಿಶೀಲಿಸಿ ಈ ಬಜೆಟ್ ನಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ತಿರುಪತಿ ತಿಪ್ಪಮ್ಮನ ದರ್ಶನದ ಹೆಸರಿನಲ್ಲಿ ಧೋನಿ ಮಾನೇಜರ್‌ಗೆ ಪಂಗನಾಮ

ಬೆಂಗಳೂರು: ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಪಿಎ ತಾನು ಎಂದು ಹೇಳಿಕೊಂಡು ಇಂಡಿಯಾ ಕ್ರಿಕೆಟ್ ತಂಡದ ಮಾಜಿ ಕ್ಯಾಪ್ಟನ್ ಎಂಎಸ್ ಧೋನಿ ಅವರ ಮ್ಯಾನೇಜರ್‌ಗೆ ವಂಚಿಸಿದ ಘಟನೆ ಕಳೆದ ಅಕ್ಟೋಬರ್ ನಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ತಿರುಪತಿಯಲ್ಲಿ ಶ್ರೀ ವೆಂಕಟೇಶ್ವರ ದೇವರ ಸ್ಪೆಷಲ್ ದರ್ಶನ ಮಾಡಿಸಿಕೊಡುತ್ತೇನೆ ಎಂದು ಹೇಳಿ ವಂಚಕನೊಬ್ಬ ಲಕ್ಷಾಂತರ ರೂಪಾಯಿ ವಂಚಿಸಿದ್ದಾನೆ.

ಈ ಕುರಿತು ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಎಂಎಸ್ ಧೋನಿ ಅವರ ಮ್ಯಾನೇಜರ್ ಸ್ವಾಮಿನಾಥನ್ ಎಂಬವರಿಗೆ ಬರೋಬ್ಬರಿ ಆರುವರೆ ಲಕ್ಷ ರೂಪಾಯಿಗಳಷ್ಟು ವಂಚಿಸಲಾಗಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಪಿಎ ತಾನು; ತಾನು ಐಎಎಸ್ ಅಧಿಕಾರಿಯಾಗಿದ್ದು, ತಿರುಪತಿಯಲ್ಲಿ ಹನ್ನೆರಡು ಮಂದಿಗೆ ದೇವರ ವಿಶೇಷ ದರ್ಶನ ಮಾಡಿಸುತ್ತೇವೆ; ರೂಮ್ ವ್ಯವಸ್ಥೆ ಇರುತ್ತದೆ.

ಪ್ರೋಟೋಕಾಲ್ ಮೂಲಕ ಯಾರನ್ನಾದ್ರೂ ಕಳಿಸುವ ಅಧಿಕಾರ ತನಗಿದೆ ಎಂದು ಒಬ್ಬಾತ ವಂಚಿಸಿದ್ದಾನೆ.

ಸ್ನೇಹಿತರ ಕುಟುಂಬವನ್ನು ಕಳಿಸುವ ನಿಟ್ಟಿನಲ್ಲಿ ಮೂರು ಲಕ್ಷ ರೂಪಾಯಿ ಹಣವನ್ನು ಧೋನಿ ಅವರ ಮ್ಯಾನೇಜರ್ ಸ್ವಾಮಿನಾಥನ್ ಅವರು ಫೋನ್ ಪೇ ಮಾಡಿದ್ದರು. ಸಾಯಿ ಟ್ರಸ್ಟ್ ಹೆಸರಿಗೆ ಮೂರು ಲಕ್ಷ ಹಣ ಪಡೆದಿರುವ ಆರೋಪವಿದೆ. ಹಣ ಪಡೆದು ಹಿಂತಿರುಗಿಸದ ಹಿನ್ನೆಲೆಯಲ್ಲಿ ಸ್ವಾಮಿನಾಥನ್ ಅವರು ಹೆಚ್‌ಎಸ್‌ಆರ್ ಲೇಔಟ್ ಠಾಣೆಗೆ ದೂರು ನೀಡಿದ್ದಾರೆ.

ಹೈಕೋರ್ಟ್ ಮುಖ್ಯ ನ್ಯಾಯಾಮೂರ್ತಿಯಾಗಿ ಪಿ.ಎಸ್.ದಿನೇಶ್ ಕುಮಾರ್ ಅಧಿಕಾರ ಸ್ವೀಕಾರ

ಬೆಂಗಳೂರು: ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಾಮೂರ್ತಿಯಾಗಿ ಪಿ.ಎಸ್.ದಿನೇಶ್ ಕುಮಾರ್ ಅಧಿಕಾರ ಸ್ವೀಕಾರ ಮಾಡಿದರು. ಅವರಿಗೆ ರಾಜ್ಯಪಾಲರದ ವಜೂಬಾಯಿವಾಲ ಅವರು ಪ್ರತಿಜ್ಞಾವಿಧೀಯನ್ನು ಭೋದಿಸಿದರು. ಅಂದ ಹಾಗೇ ನ್ಯಾಯಮೂರ್ತಿ ಪಿ.ಎಸ್. ದಿನೇಶ್ ಕುಮಾರ್ ಅವರು ಫೆಬ್ರುವರಿ 24ರಂದು ಕರ್ತವ್ಯದಿಂದ ನಿವೃತ್ತರಾಗಲಿದ್ದಾರೆ. ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಅವರ ಅಧಿಕಾರ ಅವಧಿ ಒಂದು ತಿಂಗಳಿಗೂ ಮೊದಲೇ ಕೊನೆಗೊಳ್ಳಲಿದೆ. ಈ ಹಿಂದೆ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಆಗಿದ್ದ ಪ್ರಸನ್ನ ಬಿ. ವರಾಳೆ ಅವರು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಯಾಗಿ ಈಚೆಗೆ ಪದೋನ್ನತಿ ಪಡೆದಿದ್ದಾರೆ.

ಬೆಂಗಳೂರು: ಮತ್ತೆರಡು ಕಡೆ ಟೆಲಿ ಐಸಿಯು ಕ್ಲಸ್ಟರ್'ಗೆ ಡಿಕೆ.ಶಿವಕುಮಾರ್ ಚಾಲನೆ



ಬೆಂಗಳೂರು: ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಬೆಂಗಳೂರಪ ಮತ್ತು ಬಳ್ಳಾರಿ ಜಿಲ್ಲೆಯಲ್ಲಿ ಟೆಲಿ ಐಸಿಯು ಕ್ಲಸ್ಟರ್ ಅನ್ನು ಶುಕ್ರವಾರ ಉದ್ಘಾಟಿಸಿದರು.

ಬೆಂಗಳೂರು ನಗರದ ವಿಕ್ಟೋರಿಯಾ ಆಸ್ಪತ್ರೆ ಹಾಗೂ ಬಳ್ಳಾರಿ ವೈದ್ಯಕೀಯ ಕಾಲೇಜಿನಲ್ಲಿ ನೂತನ ಟೆಲಿ ಐಸಿಯು ಕ್ಲಸ್ಟರ್ ಮಾಡಲಾಗಿದ್ದು, ಅಲ್ಲಿಂದಲೇ ತಾಲೂಕು ಆಸ್ಪತ್ರೆಗಳ ಐಸಿಯು ಕೇಂದ್ರಗಳನ್ನು ಪರಿಶೀಲಿಸಿ ನಿಗಾವಹಿಸಬಹುದಾಗಿದೆ. ಆರೋಗ್ಯ ರಕ್ಷಣೆಯಲ್ಲಿ ಟೆಲಿ-ಇಂಟೆನ್ಸಿವ್ ಕೇರ್ ಘಟಕಗಳು ಕ್ರಾಂತಿಕಾರಿ ಹೆಜ್ಜೆಯಾಗಿದ್ದು, ಇದು ಗ್ರಾಮೀಣ ಪ್ರದೇಶಗಳಿಗೆ ವರದಾನವಾಗಿದೆ ಎಂದು ಡಿಕೆ.ಶಿವಕುಮಾರ್ ಅವರು ಹೇಳಿದರು. ಅಲ್ಲದೆ, ಪ್ರತಿಯೊಬ್ಬರೂ ಗುಣಮಟ್ಟದ ಆರೋಗ್ಯ ಸೇವೆಯನ್ನು ಪಡೆಯಲು ಈ ಕೇಂದ್ರಗಳನ್ನು ರಾಜ್ಯದಾದ್ಯಂತ ವಿಸ್ತರಿಸಬೇಕೆಂದು ತಿಳಿಸಿದರು.

ಇದು ಆರೋಗ್ಯ ಕ್ಷೇತ್ರದ ಯೋಜನೆ ಮಾತ್ರವಲ್ಲ. ಶಿಕ್ಷಣ ಕ್ಷೇತ್ರದ ಕ್ರಾಂತಿಯೂ ಆಗಿದೆ. ನಮ್ಮ ಬದುಕಿನಲ್ಲಿ ಪ್ರತಿನಿತ್ಯ ತಾಂತ್ರಿಕತೆ ವಿಚಾರವಾಗಿ ಅನೇಕ ಸಂಶೋಧನೆ ನಡೆಯುತ್ತಿವೆ. ನಮ್ಮ ರಾಜ್ಯ ದೇಶದ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದ್ದು, ಆರೋಗ್ಯ ಕ್ಷೇತ್ರದಲ್ಲೂ ಮುಂಚೂಣಿಯಲ್ಲಿದೆ. ಹೆಲ್ತ್ ಟೂರಿಸಂ ನಲ್ಲೂ ನಮ್ಮ ರಾಜ್ಯ ಹೆಸರು ಮಾಡಿದೆ. ಖಾಸಗಿ ಆರೋಗ್ಯ ಸೇವಾದಾರರು ಕೂಡ ಈ ವಿಚಾರವಾಗಿ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ ಎಂದರು.

ದಿನೇಶ್ ಗೂಂಡುರಾವ್ ಅವರ ಆರೋಗ್ಯ ಇಲಾಖೆಯಲ್ಲಿರುವ ಅಧಿಕಾರಿಗಳು ಬಹಳ ಬದ್ಧತೆ ಹೊಂದಿದ್ದಾರೆ. ಇಂತಹ ತಂಡದಿಂದ ಮಾತ್ರ ಈ ರೀತಿಯ ಕಾರ್ಯಕ್ರಮ ನೀಡಲು ಸಾಧ್ಯ. ಗ್ರಾಮೀಣ ಪ್ರದೇಶದ ಜನರನ್ನು ಬೆಂಗಳೂರಿಗೆ ತರುವಷ್ಟರಲ್ಲಿ ಅನಾಹುತ ಸಂಭವಿಸುತ್ತವೆ. ಹೀಗಾಗಿ ತಾಲೂಕು ಮಟ್ಟದಲ್ಲಿ ಐಸಿಯು ಬೆಡ್ ಗಳ ಕೇಂದ್ರಗಳನ್ನು ಸ್ಥಾಪಿಸಬೇಕು.

ಜನರ ಆರೋಗ್ಯ ಕಾಪಾಡಲು ನಮ್ಮ ಸರ್ಕಾರ ಬದ್ಧವಾಗಿದೆ. ನಮ್ಮ ಆರೋಗ್ಯವೇ ನಮ್ಮ ನಿಜವಾದ ಆಸ್ತಿ. ಹೀಗಾಗಿ ನಾಡಿನ ಜನರ ಆರೋಗ್ಯ ಕಾಪಾಡಬೇಕು. ವೈದ್ಯಕೀಯ ಶಿಕ್ಷಣದಲ್ಲಿ ಹೆಣ್ಣುಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಮುಂದೆ ಬಂದಿದ್ದಾರೆ. ಈ ಕ್ಷೇತ್ರದಲ್ಲಿ 24 ತಾಸು ಕೂಡ ಕೆಲಸ ಮಾಡಬೇಕಾಗುತ್ತದೆ. ಅಂತಹ ವೃತ್ತಿಯನ್ನು ಆಯ್ಕೆ ಮಾಡಿಕೊಂಡು ಮಾನವನ ಸೇವೆಗೆ ಮುಂದಾಗಿರುವುದಕ್ಕೆ ಅಭಿನಂದನೆಗಳು. ನಿಮ್ಮ ಜತೆ ಸರ್ಕಾರ ಸದಾ ನಿಲ್ಲಲಿದೆ. ಇಂತಹ ನೂರಾರು ಕ್ಯಾಂಪಸ್ ನಿರ್ಮಾಣ ಮಾಡಬೇಕು.

ದೇಶದಲ್ಲಿ ಅತಿ ಹೆಚ್ಚು ಮೆಡಿಕಲ್ ಕಾಲೇಜುಗಳನ್ನು ಹೊಂದಿರುವ ರಾಜ್ಯ ಎಂದರೆ ಅದು ಕರ್ನಾಟಕ. ನಮ್ಮ ರಾಜ್ಯದಲ್ಲೇ ಅತಿ ಹೆಚ್ಚು ವೈದ್ಯರನ್ನು ತಯಾರು ಮಾಡಲಾಗುತ್ತಿದೆ. ಇಲ್ಲಿ ತಯಾರಾಗುವ ವೈದ್ಯರನ್ನು ಹೊರ ರಾಜ್ಯಗಳು ಹಾಗೂ ದೇಶಗಳಿಗೆ ರವಾನೆ ಮಾಡುತ್ತಿದ್ದೇವೆ. ನಮ್ಮ ವೈದ್ಯಕೀಯ ಶಿಕ್ಷಣ ಕಾಲೇಜುಗಳನ್ನು ಆರ್ಥಿಕ ಸ್ವಾವಲಂಬನೆ ಕಂಡುಕೊಳ್ಳುವಂತೆ ಮಾಡಿಕೊಳ್ಳುವಂತೆ ವ್ಯವಸ್ಥೆ ರೂಪಿಸುವಂತೆ ಸಲಹೆ ನೀಡುತ್ತೇನೆ ಎಂದು ಹೇಳಿದರು.

ಕೊಡಗು: ಸುದ್ದಿ ನಿರೂಪಕಿ ಕೆಲಸ ಕೊಡಿಸುವುದಾಗಿ ಹೇಳಿ ನರ್ಸ್'ಗೆ ವಂಚನೆ, ಹಲ್ಲೆ



ಮಡಿಕೇರಿ: ಸುದ್ದಿ ನಿರೂಪಕಿ ಕೆಲಸ ಕೊಡಿಸುವುದಾಗಿ ಹೇಳಿ ಮಹಿಳೆಯಿಂದ ಚಿನ್ನಾಭರಣಗಳನ್ನು ಪಡೆದಿದ್ದ ಪತ್ರಕರ್ತನೊಬ್ಬ ನಂತರ ಆಕೆಗೆ ವಂಚಿಸಿ, ಹಲ್ಲೆ ನಡೆಸಿರುವ ಘಟನೆಯೊಂದು ಗೋಣಿಕೊಪ್ಪಲುವಿನಲ್ಲಿ ನಡೆದಿದೆ.

ಆರೋಪಿಯನ್ನು ಕೊಡಗಿನ ಸ್ಥಳೀಯ ವಾಹಿನಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಪತ್ರಕರ್ತ ನಾಗೇಶ್ ಡಿ ಎಂದು ಗುರ್ತಿಸಲಾಗಿದೆ.

ಮಹಿಳೆ ಗೋಣಿಕೊಪ್ಪಲು ಸಮುದಾಯ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದು, ತಿಂಗಳಿಗೆ ರೂ.10,000 ವೇತನ ನೀಡುವ ಸುದ್ದಿ ನಿರೂಪಕಿ ಕೆಲಸ ಕೊಡಿಸುವುದಾಗಿ ಆರೋಪಿ ಮಹಿಳೆಯನ್ನು ನಂಬಿಸಿದ್ದಾನೆ. ಬಳಿಕ ಉದ್ಯೋಗ ಭದ್ರ ಪಡಿಸಿಕೊಳ್ಳಲು ಹೂಡಿಕೆ ಮಾಡಲು ಹಣ ಬೇಕು ಎಂದು ಹೇಳಿ, ಆಕೆಯ ಚಿನ್ನಾಭರಣಗಳನ್ನು ಪಡೆದುಕೊಂಡಿದ್ದಾನೆ.

ಹಲವು ದಿನಗಳು ಕಳೆದರೂ ಕೆಲಸ ಕೊಡಿಸದಿದ್ದಾಗ ಮಹಿಳೆ ತನ್ನ ಚಿನ್ನಾಭರಣವನ್ನು ಹಿಂದಿರುಗಿಸುವಂತೆ ಕೇಳಿದ್ದಾರೆ. ಇದರಿಂದ ಕೆಂಡಾಮಂಡಲಗೊಂಡಿರುವ ಆತ ಮಧ್ಯರಾತ್ರಿ ಆಸ್ಪತ್ರೆಗೆ ನುಗ್ಗಿ ಮಹಿಳೆ ಮೇಲೆ ಹಲ್ಲೆ ನಡೆಸಿ, ಬೆದರಿಕೆ ಹಾಕಿದ್ದಾನೆ. ಅಲ್ಲದೆ, ಆಕೆಯ ರಕ್ಷಣೆಗೆ ತೆರಳಿದ್ದ ಆಸ್ಪತ್ರೆ ಇತರ ಸಿಬ್ಬಂದಿಗಳ ಮೇಲೂ ಹಲ್ಲೆ ನಡೆಸಿದ್ದಾರೆ. ಘಟನೆಯ ವಿಡಿಯೋವನ್ನು ಸ್ಥಳದಲ್ಲಿದ್ದ ಮತ್ತೊಬ್ಬ ಸಿಬ್ಬಂದಿ ತಮ್ಮ ಮೊಬೈಲ್ ನಲ್ಲಿ ರೆಕಾರ್ಡ್ ಮಾಡಿಕೊಂಡಿದ್ದಾರೆ. ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆಯೇ ಆರೋಪಿ ತಲೆಮರೆಸಿಕೊಂಡಿದ್ದಾರೆ.

ಘಟನೆ ಬಳಿಕ ಮಹಿಳೆ ಪೊಲೀಸರಿಗೆ ದೂರು ನೀಡಲು ಮುಂದಾಗಿದ್ದರು. ಆದರೆ, ಪೊಲೀಸರು ದೂರು ದಾಖಲಿಸಿಕೊಳ್ಳಲು ಹಿಂದೇಟು ಹಾಕಿದ್ದರು. ನಂತರ ಡಿಹೆಚ್‌ಒ ಸತೀಶ್ ಕುಮಾರ್ ಅವರ ಸೂಚನೆ ಮೇರೆಗೆ ದೂರು ದಾಖಲಿಸಿಕೊಂಡಿದ್ದಾರೆ.

ಆರೋಪಿ 8 ಸಿಮ್ ಕಾರ್ಡ್ ಗಳನ್ನು ಹೊಂದಿದ್ದು, ಆತನ ಪತ್ತೆಗಾಗಿ ಹುಡುಕಾಟ ಮುಂದುವರೆದಿದೆ ಎಂದು ಪೊಲೀಸರು ಹೇಳಿದ್ದಾರೆ.

ಆಸ್ಪತ್ರೆಯ ನರ್ಸ್ ಮೇಲೆ ಹಲ್ಲೆ ನಡೆಸಿದ ಆರೋಪ ಹೊತ್ತಿರುವ ಪತ್ರಕರ್ತರ ಪತ್ತೆಗೆ ಗೋಣಿಕೊಪ್ಪಲು ಪೊಲೀಸರು ಬಲೆ ಬೀಸಿದ್ದಾರೆ. ಬುಧವಾರ ತಡರಾತ್ರಿ ಗೋಣಿಕೊಪ್ಪಲು ಸಮುದಾಯ ಆಸ್ಪತ್ರೆಯಲ್ಲಿ ಹಲ್ಲೆ ಪ್ರಕರಣ ವರದಿಯಾಗಿದೆ.

ಇನ್ನು ಘಟನೆಗೆ ಜಿಲ್ಲೆಯ ಪತ್ರಕರ್ತರ ಸಂಘಗಳು ಖಂಡನೆ ವ್ಯಕ್ತಪಡಿಸಿದ್ದು, ಸಂಘದಿಂದ ಆರೋಪಿಯನ್ನು ಅಮಾನತುಗೊಳಿಸುವುದಾಗಿ ತಿಳಿಸಿದೆ.

ಮನೆಯಿಂದಲೇ ಚೋಪ್ರಾಗೆ ಸಂಕಷ್ಟ: 166 ಕೋಟಿ ಬೆಲೆಯ ಬಂಗಲೆ ತೊರೆದ ಸ್ಟಾರ್ ಜೋಡಿ

ಬೆಂಗಳೂರು: ಹಾಲಿವುಡ್, ಬಾಲಿವುಡ್ ನಟಿ ಪ್ರಿಯಾಂಕ ಚೋಪ್ರಾ 2018ರಲ್ಲಿ ನಿಕ್ ಜೋನಾಸ್ ಮದ್ವೆಯಾದ ಮೇಲೆ ಅಮೆರಿಕದ ಲಾಸ್ ಏಂಜಲಿಸ್ನಲ್ಲಿ ವಾಸವಿದ್ದಾರೆ. ಮದುವೆಯಾದ ಹೊಸತರಲ್ಲೇ 2019ರಲ್ಲಿ 166 20 ಮಿಲಿಯನ್ ಡಾಲರ್ (ಸುಮಾರಿ 166 ಕೋಟಿ ರೂಪಾಯಿ) ಕೊಟ್ಟು ಮನೆಯನ್ನು ಖರೀದಿಸಿದ್ದರು. ಆದರೆ ಪ್ರಿಯಾಂಕ ಚೋಪ್ರಾಗೆ ಈ ಮನೆಯೇ ಕಂಟಕವಾಗಿದ್ದು, ಭವ್ಯ ಬಂಗಲೆಯನ್ನು ತೊರೆದಿದ್ದಾರಂತೆ.

ಮನೆ ಖರೀದಿಸಿದ ನಂತರ ಪ್ರಿಯಾಂಕ ಚೋಪ್ರಾ ದಂಪತಿಗೆ ಒಂದಾದರ ಮೇಲೆ ಒಂದರಂತೆ ಸಂಕಷ್ಟಗಳು ಬರುತ್ತಿವೆಯಂತೆ. ಖರೀದಿಸಿದ ದಿನದಿಂದ ಮನೆಯಲ್ಲಿ ಸಮಸ್ಯೆಗಳ ಆಗರವೇ ಇದೆಯಂತೆ. ಅದರಲ್ಲಿ

"ದಿಟ್ಟನಡೆ ನುಡಿಯ ವಚನಕಾರ ನಿಜಶರಣ ಅಂಬಿಗರ ಚೌಡಯ್ಯನವರು"

ಹನ್ನೆರಡನೆಯ ಶತಮಾನದ ಬಸವಾದಿ ಶಿವಶರಣರ ಮಹಾಕ್ರಾಂತಿಯಲ್ಲಿ ಹೊರಹೊಮ್ಮಿದ, ತನ್ನ ದಿಟ್ಟ ನಡೆ, ನುಡಿಯಿಂದ ಸಮಾಜದ ಅಂಕು-ಡೊಂಕುಗಳನ್ನು ತಿದ್ದಲು ಪ್ರಯತ್ನಿಸಿದ ಅಪರೂಪದ ಶರಣ ಶ್ರೀ ಅಂಬಿಗರ ಚೌಡಯ್ಯನವರು, ನಿಷ್ಠುರ ವಚನಗಳ ಮೂಲಕ ಶಿವಶರಣದಿಂದಲೇ "ವೀರಗಣಾಚಾರಿ ಎಂದು ಕರೆಯಿಸಿಕೊಂಡವರು, ಅವರು.

ಅಂಬಿಗರ ಚೌಡಯ್ಯನವರು "ಅಂಬಿಗ, ಅಂಬಿಗ ಎಂದು ಕುಂದು ನುಡಿಯದಿರು, ನಂಬಿದರೆ ಒಂದೇ ಹುಟ್ಟಿನಲ್ಲಿ ಕಡೆಯ ಹಾಯಿಸುವನೆಂಬ ಅಂಬಿಗರ ಚೌಡಯ್ಯ" ಎಂಬಂಥ ದಿಟ್ಟ ವಚನ ರಚಿಸಿ ತಾನು ಹುಟ್ಟಿದ ಜಾತಿಯ ಬಗ್ಗೆ ಆತ್ಮ ವಿಶ್ವಾಸ ಮೂಡಿಸಿದ ಈ ನಿಜಶರಣ ತನ್ನ ಕುರಿತು ಆತ್ಮ ವಿಶ್ವಾಸ ಹೊಂದಿದ ಧೀರ ವಚನಕಾರ, ಅಂಕಿತ ನಾಮವನ್ನಾಗಿ ತನ್ನ ವಚನಗಳಿಗೆ ತನ್ನ ಹೆಸರನ್ನೇ ಬಳಸಿದ ಏಕೈಕ ಶರಣ ಎನ್ನಬಹುದು. ತಾನು ಕಂಡ ಅನುಭವಗಳನ್ನು ವಚನಗಳ ಮೂಲಕ ಹೇಳಿ ಸಮಾಜದಲ್ಲಿರುವ ಮೂಢನಂಬಿಕೆ, ಕಂದಾಚಾರ, ಅಂಧ ಶ್ರದ್ಧೆಯನ್ನು ಹೋಗಲಾಡಿಸಲು ಶಮವಹಿಸಿದವರು. ಇವರ ವಚನಗಳ ಭಾಷೆ ಸರಳವಾಗಿದ್ದು ಜನಸಾಮಾನ್ಯರು ಅರಿಯಲು ಸಹಾಯಕವಾಗಿವೆ. ಅವುಗಳ ಕುರಿತು ಇಂದಿನ ಸಮಾಜದಲ್ಲಿ ಅರಿಯುವ ಪ್ರಯತ್ನ ಮಾಡಬೇಕಾಗಿದೆ. ಜನಸಾಮಾನ್ಯರಿಗೆ ತಲುಪಬೇಕಾಗಿವೆ.

ಶರಣರು ತಮ್ಮ ಕಾಯಕವನ್ನು ಆಧ್ಯಾತ್ಮಿಕ ನೆಲೆಯಲ್ಲಿ ಹೇಳಿರುವಂತೆ ಅಂಬಿಗರ ಚೌಡಯ್ಯನವರು ತಾವು ಮಾಡಿರುವ ಕಾಯಕವನ್ನು ಅಭಿಮಾನದಿಂದ ಹೇಳಿರುವರು, ಇತಿಹಾಸಕಾರರು ಅಭಿಪ್ರಾಯಪಡುವಂತೆ ಅಂಬಿಗರ ಚೌಡಯ್ಯ ಅಪರೂಪದ ಅಂಬಿಗ, ಅನುಭಾವಿ, ಅಂಬಿಗ, ತಡೆ ನೆಲೆಯಿಲ್ಲದ ಮಹಾನದಿಯ ಒಡಲಿಲ್ಲದ ಅಂಬಿಗ, ಹಿಡಿದು ಬಿಡುವ ಮನವ ಬೆಲೆಗೊಟ್ಟೊಡೆ ಮಹಾ ಹೊಳೆಯ ಕಡೆಗಾಣಿಸಿ ಹಾಯಿಸುವ ಅಂಬಿಗ, ನುಡಿಯಿಲ್ಲದ ನಿಸ್ಸೀಮ ಗ್ರಾಮದಲ್ಲಿರಿಸುವ ಅಂಬಿಗ, ಆತ್ಮವಿಶ್ವಾಸದ ಅಂಬಿಗ, ಅಂಬಿಗರ ಚೌಡಯ್ಯನಲ್ಲಿ ಅಪ್ರತಿಮ ಜ್ಞಾನ, ತರ್ಕಶಕ್ತಿ, ಆಧ್ಯಾತ್ಮ ಶಕ್ತಿಯು ಇತ್ತು.

ಅಂಬಿಗರ ಚೌಡಯ್ಯನವರ ಜನನ, ತಂದೆತಾಯಿಗಳಹಾಗೂ ಆತ ಬಾಲ್ಯ ಸ್ಥಳಗಳ ಕುರಿತು ಇತಿಹಾಸಕಾರರಲ್ಲಿ ಒಮ್ಮತ ಮೂಡಿ ಬಂದಿಲ್ಲ. ಉಪಲಬ್ಧ ಸಾಹಿತ್ಯದ ಪ್ರಕಾರ ತಿಳಿಯುವ ಪ್ರಯತ್ನ ಮಾಡಬಹುದು. ಶರಣ ಧರ್ಮವನ್ನು ಎತ್ತಿ ಹಿಡಿದಿರುವ ಇವರ ಬಗ್ಗೆ ಅಂದಿನ ಸಾಹಿತ್ಯಕಾರರು, ಇತಿಹಾಸಕಾರರು ಮೌನವಾಗಿರುವದು ಆಶ್ಚರ್ಯಕರವಾದ ಸಂಗತಿಯಾಗಿದೆ.

ಆದರೆ ಗುರುರಾಜ ಚಾರಿತ್ರ್ಯದ ಬಸವಾದಿ ಶಿವಶರಣರ ಪ್ರಮಥರಲ್ಲಿ ಇವರ ಹೆಸರಿದೆ. ಮಹಾ ಕವಿ ಷಡಕ್ಷರಿಯ ವೃಷಬೇಂದ್ರ ವಿಜಯದಲ್ಲಿ, ರಸ-ಋಷಿಮುಪ್ಪಿನ ಷಡಕ್ಷರಿ ಸೇರಿದಂತೆ ಮೊದಲಾದವರ ತತ್ವ ಪದಗಳಲ್ಲಿ ಇವರ ಹೆಸರು ಬಂದಿದೆ. ಘನಲಿಂಗದೇವನ (ಸು-1480) ವಚನದಲ್ಲಿ ಹಾಗೂ ಮಹಾಲಿಂಗ ವಿರಚಿತ ಗುರುಭೋದಾಮೃತ ಗ್ರಂಥದಲ್ಲಿಯೂ ಅಂಬಿಗರ ಚೌಡಯ್ಯನವರ ಬಗ್ಗೆ ಉಲ್ಲೇಖವಿದೆ. ಕರ್ನಾಟಕ ಕವಿ ಚರಿತ್ರೆಕಾರರು ಅಂಬಿಗರ ಚೌಡಯ್ಯನವರ ಕಾಲ ಸುಮಾರು 1160 ಎಂದು ಹೇಳಿರುವರು. ಹೀಗಾಗಿ ಇಂದಿಗೆ 858 ನೇಯ ಜಯಂತಿ ಎಂದು ಪರಿಗಣಿಸಬಹುದಾಗಿದೆ. ಇವರ 297 ವಚನಗಳು ದೊರಕಿವೆ. ಅವುಗಳೆಲ್ಲ ಸಮಾಜ ಚಿಂತನೆಯಿಂದ ಮೂಡಿಬಂದಿವೆ. ಇವರ ವಚನಗಳನ್ನು ಗಮನಿಸಿದರೆ ಅವರೊಬ್ಬ ಬಂಡಾಯದ ಶರಣ ಎಂದೆನಿಸುವರು. ಅವರ ವಚನಗಳಲ್ಲಿ ಸದಾ ಸಮಾಜದ ಚಿಂತನೆ, ಒಳಿತು ಕಾಣಬಹುದು.

12 ನೇ ಶತಮಾನ ಬಸವಾದಿ ಶಿವಶರಣರ ಕ್ರಾಂತಿಗೆ ಹೆಸರಾದದ್ದು. ಸಕಲ ಜೀವ ರಾಶಿಗಳಿಗೆ ಲೇಸನ್ನೆ ಬಯಸಿದ ಶರಣರಿಗೆ "ಅನುಭವ ಮಂಟಪ" ಆಧ್ಯಾತ್ಮಿಕ ಸಾಧನೆಗೆ ದಾರಿದೀಪವಾಯಿತು. ಸರ್ವ ಶರಣ-ಶರಣಿಯರಿಗೆ ಅನುಭವ ಚಿಂತನೆ ಮಾಡಲು ವೇದಿಕೆಯಾಯಿತು. ಜಾತಿ-ಧರ್ಮ, ವರ್ಣರಹಿತ, ಯಾವುದೆ ಬೇದ ಭಾವವಿಲ್ಲದ ಆದರ್ಶ ಚಿಂತನೆ ಸಮಾಜ ನಿರ್ಮಾಣಕ್ಕೆ ಅಂದು ಸಂಕಲ್ಪ ಮಾಡಲಾಗಿತ್ತು. ವಿಶ್ವ ವ್ಯಾಪ್ತಿಯಲ್ಲಿ ಅನ್ವಯವಾಗುವ ಕಾಯಕವೇ ಕೈಲಾಸ ಎಂಬ ನೀತಿ ಹೊರಹೊಮ್ಮಿತು. ಅಂದು ಸ್ತ್ರೀಯರಿಗೆ ಧಾರ್ಮಿಕ ಸ್ವಾತಂತ್ರ್ಯ ನೀಡಲಾಗಿತ್ತು. ಜಾತಿ ವ್ಯವಸ್ಥೆ, ಸಾಮಾಜಿಕ ಮೂಢನಂಬಿಕೆಗಳ ವಿರೋಧಿಸಿ ಹೋರಾಡಲು ಪ್ರೇರೆಪಿಸಿತು. ಅಂದಿನ ಶರಣ ಸಮೂಹ ಕಾಯಕದಲ್ಲಿ ಬೇದ ಭಾವವೆನಿಸದೆ ಉದಾತ್ತ ಮಾರ್ಗದರ್ಶಿ ಜೀವನ ನಡೆಸಿತು. ವಿವಿಧ ಕಾಯಕದಲ್ಲಿ ನಿರತರಾಗಿರುವ ಶರಣರು ವಚನ ಸಾಹಿತ್ಯ ರಚನೆಯಲ್ಲಿ ತೊಡಗಿದ್ದರು. ಅವರಲ್ಲಿ ಅಂಬಿಗ ಕೆಲಸ ನಿರ್ವಹಿಸಿರುವ ಶರಣ ಶ್ರೀ ಅಂಬಿಗರ ಚೌಡಯ್ಯನವರು ಓರ್ವರು. ಅನುಭವ ಮಂಟಪದಲ್ಲಿ ಶರಣ ಸಮೂಹಕ್ಕೆಲ್ಲ ಸರಿ ಸಮಾನ ಸ್ಥಾನ ದೊರೆಯಿತು. ಇತಿಹಾಸಕಾರರು ಅಭಿಪ್ರಾಯ ಹೊಂದಿರುವಂತೆ ಶ್ರೀ ಅಂಬಿಗರ ಚೌಡಯ್ಯನವರು ಶರಣ ಸಾಹಿತ್ಯದಲ್ಲಿ ಮೆರೆಯುವ ಧೀಮಂತ ವ್ಯಕ್ತಿ, ಬಸವಣ್ಣವರ ಸಮಕಾಲಿನವರೆಂದು ಪರಂಪರೆಯ ನಂಬುಗೆ ಇದೆ ಆದರೂ 13 ನೇಯ ಶತಮಾನದ ಶಿವದೇವ ಒಡೆಯರರ ಶಿಷ್ಯರೆಂದು ಕೆಲವರು ಅಭಿಪ್ರಾಯ ಪಡುವರು. ದೊರಕಿರುವ ಕೆಲ ಶಾಸನಗಳು ಇವಕ್ಕೆ ಆಧಾರವಾಗಿವೆ. ಅಂಬಿಗರ ಚೌಡಯ್ಯನವರು ತಮ್ಮ ಗುರು ಶಿವದೇವ ಒಡೆಯರರಿಗೆ ಇಂದಿನ ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ಚೌಡ ದಾನಾಪೂರವನ್ನು ದಾನವನ್ನಾಗಿ ನೀಡಿದರಂತೆ. ಅಂದು ಆ ಗ್ರಾಮ ಶಿವಪುರ (ಚಂದಾಪೂರ-ನರಶಿಪುರ) ವಾಗಿತ್ತು. ಅದು ಅಂಬಿಗರ ಚೌಡಯ್ಯನವರ ಜನ್ಮ ಸ್ಥಳವಾಗಿದೆ. ದಾನ ನೀಡಿದ ಕಾರಣಕ್ಕಾಗಿ ಚೌಡ ದಾನಾಪೂರವಾಗಿದೆ. ಅಂಬಿಗರ ಚೌಡಯ್ಯನವರು ಶಿವದೇವರಂತ ಮಹಾನ್ ತಪಸ್ವಿಗಳು ಸಿದ್ಧಿ ಪಡೆದ ಸಿದ್ಧಪುರುಷರು, ಲಿಂಗಪೂಜಾ ನಿಷ್ಠರಾದ ಅವರಿಗೆ ಶಿಷ್ಯರಾಗಿ ಅಪಾರವಾದ ತತ್ವಜ್ಞಾನ ಹೊಂದಿದ್ದರು. ಅನುಭಾವಿಯಾದರು ಆಚಾರ-ವಿಚಾರಗಳ ಸುಂದರ ಸಮನ್ವಯದಿಂದಾಗಿ ಅನುಭವ ಮಂಟಪದ ಇತರ ಶಿವಶರಣರಂತೆ ಕಲ್ಯಾಣದಲ್ಲಿ ಕೆಲ ಸಮಯ ಕಳೆದಿರಬಹುದು. ಕೊನಗೆ ಸಂಚಾರ ಮಾಡುತ್ತಾ ಬಂದು ಚೌಡಯ್ಯ ದಾನಾಪೂರದಲ್ಲಿಯೇ ಲಿಂಗೈಕ್ಯರಾಗಿರುವರು. ಅವರ ಸ್ಮಾರಕವಾಗಿ ನದಿಯಲ್ಲಿ ಮುಳುಗಿದ ದಿಬ್ಬವಿದೆ. ಸುಂದರವಾದ ಸ್ಮಾರಕವಿದೆ. ಪ್ರತಿವರ್ಷ ಮಕರ ಸಂಕ್ರಮಣದ ದಿನ ಜಾತ್ರೆ ಜರಗುತ್ತದೆ. (ಜನೇವರಿ-15) ಅಂಬಿಗರ ಚೌಡಯ್ಯನವರಲ್ಲದೆ ಕನ್ನಡ ಸಾಹಿತ್ಯ ಲೋಕದ ಇತಿಹಾಸದಲ್ಲಿ ಮುಸುಟಿಯ ಚೌಡಯ್ಯ, ಬಹುರೂಪಿ ಚೌಡಯ್ಯ, ಸುರಗಿಯ ಚೌಡಯ್ಯ ಎಂಬ ಹೆಸರಿನ ಶರಣರು ಆಗಿ ಹೋಗಿರುವರು. ಇವರಲ್ಲಿ ಬಹುರೂಪಿ ಚೌಡಯ್ಯನು ವಚನಗಳನ್ನು ರಚಿಸಿರುವರು. ಶಂಕರ ಲಿಂಗವೆಂಬ ಕವಿಯು ಇವರ ಬಗ್ಗೆ ರಗಳೆಯನ್ನು ಬರೆದಿರುವರು. ಸುರಗಿಯ ಚೌಡಯ್ಯ, ಮುಸುಡಿಯ ಚೌಡಯ್ಯನವರ ಬಗೆಗೆ ಮಹಾಕವಿ ಹರಿಹರನು ರಗಳೆಗಳನ್ನು ಬರೆದಿರುವರು. ಸುರಗಿಯ ಚೌಡಯ್ಯ ಲೀಲಾಮೂರ್ತಿಯಾಗಿದ್ದು ಸತ್ತ ಎತ್ತನ್ನು ಹುಗಿದ 15 ವರ್ಷಗಳ ತರುವಾಯ ಬದುಕಿಸಿದ ಮಹಾಮಹಿಮನು ಕಲ್ಲು ಎತ್ತಿಗೆ ಕಬ್ಬು ತಿನಿಸಿದ ಪವಾಡ ಪುರುಷವೆಂದು ತಿಳಿದು ಬರುತ್ತದೆ. ಆದರೆ ಅಂಬಿಗರ ಚೌಡಯ್ಯನವರು ಇವರಿಗಿಂತ ಬೇರೆಯವರು.

ಇವರು ವೈಚಾರಿಕ ಪ್ರಜ್ಞೆಯ ಜಿಜ್ಞಾಸು, ಸ್ವತಂತ್ರ

ಮನೋಭಾವ, ಮನೋಧರ್ಮ ಬೆಳೆಯಿಸಿಕೊಂಡವರು. ಇವರ ವಚನಗಳ ವೈಶಿಷ್ಟವೇ ಬೇರೆಯಾಗಿವೆ. ಅವರ ವಚನಗಳು ದಿಟ್ಟ ವ್ಯಕ್ತಿತ್ವ ಹೊಂದಿವೆ. ತನ್ನ ಸುತ್ತ ಮುತ್ತಲಿನ ಸಮಾಜ ಕ್ರಿಯಾಶೀಲವಾಗಬೇಕು, ಸುಧಾರಣೆಯಾಗಬೇಕು. ಸಮಾಜದಲ್ಲಿರುವ ಜಾತಿ ವ್ಯವಸ್ಥೆ, ವಂಚನೆ, ಮೋಸ, ಶೋಷಣೆ, ಅಜ್ಞಾನ, ಮೂಢನಂಬಿಕೆ, ಅರ್ಥವಿಲ್ಲದ ಆಚರಣೆಗಳು ನಿಲ್ಲಬೇಕೆಂಬ ಆಸೆಯ ಹೊಂದಿವೆ. ತನ್ನಂತೆ ಇತರರು ಈ ವ್ಯವಸ್ಥೆಯ ವಿರುದ್ಧ ಬಂಡಾಯ ಮಾಡುವದನ್ನು ನಿರೀಕ್ಷಿಸುತ್ತಾರೆ ಅದು ಆಗದಿದ್ದಾಗ ಸಿಡಿದೇಳುವರು. ಕೆರಳಿ ಮಾತಿನಲ್ಲಿ ಬೆಂಕಿಯ ಉಂಡಿಯನ್ನೇ ಉಗುಳುವರು. ಉದಾಹರಣೆಯಾಗಿ ಅವರ ವಚನದ ಬಂಡಾಯದ ಮಾದರಿಯನ್ನು ಇಲ್ಲಿ ಕಾಣಬಹುದು.

ಕುಲ ಹೀನ ಶಿಷ್ಯಂಗೆ ಅನುಗ್ರಹ ಮಾಡಿ,
ತಿರುಗಿ ಅವನ ಮನೆಯಲ್ಲಿ ಉಣಬಾರದೆಂದು-
ಅಕ್ಕಿ-ಕಣಕವ ತಕ್ಕೊಂಡು ಹೋಗುವ ಗುರುವಿನ ಕಂಡರೆ
ಕೆಡವಿ ಹಾಕಿ ಮೂಗನೇ ಕೊಯ್ದು ಇಟ್ಟಂಗಿಯ ಕಲ್ಲಿಲೆತ್ತಿಕ್ಕಿ
ಸಾಸಿವೆ ಹಿಟ್ಟನು ತಳಿದು ಮೇಲೆ ಲಿಂಬೆಯ ಹುಳಿ ಹಿಂಡಿ
ಪಡವಲಗಾಳಿಗೆ ಹಿಡಿ ಎಂದಾತ ನಮ್ಮ-ಅಂಬಿಗರ ಚೌಡಯ್ಯ.

ಭಕ್ತ ಭಕ್ತರಲ್ಲಿ ಬೇದಭಾವವೆನಿಸಬಾರದು. ಭಕ್ತರೆಲ್ಲರೂ ಒಂದೇ ಅವರು ಯಾವುದೇ ಜಾತಿಯವರು ಯಾವುದೇ ಪಂಥದವರಿದ್ದರೂ ಒಂದೇ ಎಂದೇ ತಿಳಿಯಬೇಕು ಆದರೆ ಅದು ಬಿಟ್ಟು ಕುಲಹೀನನಾಗಿರುವಂಥ ಶಿಷ್ಯನಿಗೆ ಅನುಗ್ರಹಿಸಿ ಅವನಲ್ಲಿಯ ಹೀನತೆಯನ್ನು ಹೋಗಲಾಡಿಸಿದ ಬಳಿಕ ಅವನ ಮನೆಯೊಳಗೆ ಅಂದರೆ ಅನುಗ್ರಹ ಪಡೆದ ಕುಲಹೀನ ಶಿಷ್ಯನ ಮನೆಯಲ್ಲಿ, ಆತನಿಗೆ ಅನುಗ್ರಹ ನೀಡಿದ ಗುರುವೇ ಊಟ ಮಾಡಲು ಮನಸ್ಸು ಮಾಡದೆ ಆಹಾರ ಧಾನ್ಯಗಳನ್ನು ಮನೆಗೆ ತೆಗೆದುಕೊಂಡು ಹೋಗುವಂಥವನು ನಿಜವಾದ ಗುರುವಾಗಲಾರ ಅವನೊಬ್ಬ ಕಳ್ಳ ದರೋಡೆಕೋರನೆನಿಸಿಕೊಳ್ಳವನು. ಅಂಥವನನ್ನು ನೆಲಕ್ಕೆ ಹಾಕಿ ಕೆಡವಿ ಆತನ ಮೂಗನ್ನು ಕೊಯ್ದು ಆ ಕೊಯ್ದ ಗಾಯದ ಮೇಲೆ ಇಟ್ಟಂಗಿಯನ್ನು ಬಲವಾಗಿ ತಿಕ್ಕಿ ಅದರ ಮೇಲೆ ಸಾಸಿವೆಯ ಹಿಟ್ಟು ಉದುರಿಸಿ, ಅದರ ಮೇಲೆ ನಿಂಬೆ ಹಣ್ಣಿನ ಹುಳಿಯನ್ನು ಹಿಂಡಿ ಪಶ್ಚಿಮ ದಿಕ್ಕಿನ ಗಾಳಿಗೆ ಮುಖಮಾಡಿನಿಲ್ಲಿಸಬೇಕು.ಶಿಷ್ಯ ಶಿಷ್ಯರಲ್ಲಿ ಬೇದ ಭಾವ ಎನಿಸಿದ ಗುರುವನ್ನು ಕ್ರೂರವಾಗಿ ಶಿಕ್ಷಿಸಬೇಕೆಂದು ಅಂಬಿಗರ ಚೌಡಯ್ಯನವರ ದಿಟ್ಟ ನುಡಿ, ಪೂಜೆ ಪುನಸ್ಕಾರ ವಿಷಯದಲ್ಲಿ ಶಿಷ್ಯರನ್ನು ಶೋಷಿಸುವ ಗುರುವನ್ನು ಖಂಡಿಸಿದ ವಚನ ಇದು. ಈ ವಚನದಲ್ಲಿ ವ್ಯವಸ್ಥೆಯ ವಿರುದ್ಧ ಚೌಡಯ್ಯನವರ ಆಕ್ರೋಶವನ್ನು ಗಮನಿಸಬಹುದು ಇಂಥಹ ಹಲವು ವಚನಗಳಲ್ಲಿ ಆತನ ಆಕ್ರೋಶವನ್ನು ಅರಿಯಬಹುದಾಗಿದೆ.

ಅಂಬಿಗರ ಚೌಡಯ್ಯನವರ ವಚನಗಳ ಮೂಲಕ ಅವರ ವ್ಯಕ್ತಿತ್ವ ಹೇಳಬೇಕೆಂದರೆ ಅವರೊಬ್ಬ ಕಟ್ಟಾ ಶಿವಭಕ್ತ, ನಿಷ್ಠುರುವಾದಿ ಆದರೂ ಗುಡಿ-ಗುಂಡಾರಗಳಲ್ಲಿ, ತೀರ್ಥ ಕ್ಷೇತ್ರಗಳಲ್ಲಿ ಏನಾದರೂ ಸರಿ ದೇಹ ದಂಡಿಸಿಯಾದರೂ ದೇವರನ್ನು ಕಾಣುತ್ತೇವೆಂಬುವವರಿಗೆ ನೀವು ನಿಮ್ಮ ಅಂತರಾತ್ಮ ಒಳಹೊಕ್ಕು ನೋಡಿರೆನ್ನುವರು.

ಪರಶಿವನ ಅಂಶ ಪ್ರತಿಯೊಬ್ಬರಲ್ಲಿಯೂ ಇದ್ದರೂ ಅದನ್ನು ತಿಳಿಯದೇ ಬೇರೆ ಬೇರೆ ಕಡೆ ಹುಡುಕುವರನ್ನು ಜಾಗೃತಗೊಳಿಸಿ ನಿನ್ನಲ್ಲಿಯೇ ದೇವರನ್ನು ಕಾಣು ಎಂದು ಜಾಗೃತಗೊಳಿಸುವರು. ಅವರು ವಚನದಲ್ಲಿ ಬಳಸಿದ ಭಾಷೆ ಒರಟುತನವನ್ನು ಹೊಂದಿದ್ದರೂ "ಚಿಂತನೆಯ ಅಂಶಗಳಿವೆ" ಇವರಷ್ಟು ನಿಷ್ಠುರ ಕಠೋರವಾಗಿ, ವ್ಯಂಗವಾಗಿ, ವ್ಯಗ್ರವಾಗಿ ಟೀಕಿಸಿದ ಶರಣರು ಇಲ್ಲವೇ ಇಲ್ಲ ಎನ್ನಬಹುದು ಜನ ಜೀವನದಿಂದ ಬಂದ ಸುಂದರ ದೃಷ್ಟಾಂತಗಳಿಗೆ ಹೇಳಿರುವ ವಿಷಯದ ವಚನಗಳು ಅರ್ಥಪೂರ್ಣವಾಗಿವೆ. ಸಾಮಾಜಿಕ ಕಳಕಳಿ, ಬೆಳಕು ಬೀರುವ ಸಾಮರ್ಥ್ಯವನ್ನು ಹೊಂದಿವೆ. ನುಡಿದಂತೆ ನಡೆ ಇದೇ ಜನ್ಮ ಕಡೆ ಎಂಬ ನೀತಿಗೆ ನಿದರ್ಶನಗಳಾಗಿವೆ. ಅವರ ವಚನಗಳಲ್ಲಿ ಯಾವುದೇ ಮುಚ್ಚು ಮರೆ ಇಲ್ಲ. ಆಡಂಬರ ಜೀವನದ ಆಲಸಿಗಳನ್ನು ಬಡೆದೆಬ್ಬಿಸಿವೆ. ದಿಟ್ಟ-ಗಟ್ಟಿ ನುಡಿಯಲಿವೆ. ಮಾನವನಿಗೆ ಮಹಾಮಾನವನಾಗುವ ನಿಟ್ಟಿನಲ್ಲಿ ದಾರಿ ತೋರುವ ದಾರಿದೀಪಗಳಾಗಿವೆ. ಹೀಗಾಗಿ ಅಂಬಿಗರ ಚೌಡಯ್ಯನವರ ವಚನಗಳು ವಚನ ಸಾಹಿತ್ಯದಲ್ಲಿ ಮಹತ್ವದ ಸ್ಥಾನಪಡೆದಿವೆ. ಇಂದಿಗೂ ಕನ್ನಡಿಗರ ನಾಲಿಗೆಯ ಮೇಲೆ ನಲಿದಾಡುತ್ತಿವೆ. ಇಂದಿನ ಆಧುನಿಕ ವೈಜ್ಞಾನಿಕ ಯುಗದಲ್ಲಿಯೂ ಪ್ರಸ್ತುತವಾಗಿವೆ.

ನಾಡಿನ ಸಮಸ್ತ ಮಹಾಜನತೆಗೆ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿಯ ಹಾರ್ದಿಕ ಶುಭಾಶಯಗಳು.

-ಬಸವರಾಜ
ಫಕೀರಪ್ಪಾ ಸುಣಗಾರ
ಅಧ್ಯಕ್ಷರು ಕರ್ನಾಟಕ
ರಾಜ್ಯ ಕೋಳಿ ಬೆಸ್ತ ನೌಕರರ
ಕ್ಷೇಮಾಭಿವೃದ್ಧಿ ಸಂಘ
ಜಿಲ್ಲಾ ಘಟಕ ಬೆಳಗಾವಿ

ಕಾಗವಾಡ: ಚುನಾವಣಾ ಕೇಂದ್ರಕ್ಕೆ ಸಿಇಒ ರಾಹುಲ್ ಶಿಂಧೆ ಭೇಟಿ

ಕಾಗವಾಡ: ಇಲ್ಲಿನ ಶಿವಾನಂದ ಮಹಾವಿದ್ಯಾಲಯದ ಚುನಾವಣಾ ಮಸ್ಟರಿಂಗ್ ಮತ್ತು ಡಿಮಸ್ಟರಿಂಗ್ ಕೇಂದ್ರಗಳಿಗೆ ಶನಿವಾರ ಜಿಲ್ಲಾ ಪಂಚಾಯತ ಸಿಇಒ ರಾಹುಲ್ ಶಿಂಧೆ ಭೇಟಿ ನೀಡಿದರು. ಬಳಿಕ ಇಲ್ಲಿನ ತಾಲ್ಲೂಕು ಪಂಚಾಯತ ಕಚೇರಿಗೆ ಹಾಗೂ ತಹಶೀಲ್ದಾರ್ ಕಚೇರಿಯಲ್ಲಿ ಬರಗಾಲ ಮತ್ತು ಚುನಾವಣೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಕಾಗವಾಡ ತಹಶೀಲ್ದಾರ್ ರಾಜೇಶ ಬುರ್ಲಿ, ತಾಪಂ ಇಒ ಪ್ರವೀಣ ಪಾಟೀಲ್, ಬಿಇಒ ಎಮ್.ಆರ್. ಮುಂಜೆ, ಸಿಡಿಪಿಒ ಸಂಜೀವ ಸದಲಗಿ, ನರೇಗಾ ಎಡಿ ಗೋಪಾಲ ಮಾಳಿ, ಪಂಚಾಯತ ರಾಜ್ ಎಡಿ ಎ.ಡಿ. ಅನ್ಸಾರಿ ಸೇರಿದಂತೆ ವಿವಿಧ ಇಲಾಖೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗಿಯಾಗಿದ್ದರು.

ನಿಗದಿ, ಹಳ್ಳಿಗೇರಿ ಗ್ರಾಮಗಳಲ್ಲಿ ಸಂಚರಿಸಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದ ಸಂವಿಧಾನ ರಥ

ಧಾರವಾಡ: ಸಂವಿಧಾನ ದಿನಾಚರಣೆಯ ಪ್ರಯುಕ್ತ"ಸಂವಿಧಾನ ಜಾಗೃತಿ ಜಾಥಾವನ್ನು"ಧಾರವಾಡ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಕನ್ನಡ ಮತ್ತು ಇಲಾಖೆಯ ಸಂಯೋಗದೊಂದಿಗೆ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಉದ್ಘಾಟಿಸಿ ಚಾಲನೆ ನೀಡಿದರು. ಸದರಿ ಸಂವಿಧಾನ ಜಾಥಾವನ್ನು ದಿ:26/01/2024 ರಿಂದ ದಿ:31/01/2024 31 ಗ್ರಾಮ ಪಂಚಾಯತ್ಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿ ಯಶಸ್ಸಿಗೊಳಿಸಲಾಗಿದ್ದು ದಿ:02/02/2024ರಂದು ಹಳ್ಳಿಗೇರಿ, ನಿಗದಿ, ಮನಗುಂಡಿ, ಮನಸೂರ ಹಾಗೂ ಯರಿಕೊಪ್ಪ ಗ್ರಾಮ ಪಂಚಾಯತ್ಗಳಲ್ಲಿ

ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಧಾರವಾಡ ಶ್ರೀಮತಿ ಎಂ.ಬಿ.ಸಣ್ಣೇರ ಇವರ ಉಪಸ್ಥಿತಿಯಲ್ಲಿ ಹಲವಾರು ಕಲಾ ತಂಡಗಳು, ಶಾಲೆಯ ಮುಖ್ಯೋಪಾಧ್ಯಾಯರು, ವಿದ್ಯಾರ್ಥಿಗಳು ಗ್ರಾಮ ಪಂಚಾಯತ್ ವ್ಯಾಪ್ತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಎಲ್ಲಾ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು, ಕಾರ್ಯಕ್ರಮದಲ್ಲಿ ಪಾಲ್ಗೋಂಡು ಪ್ರಭಾತಪೇರಿಯ ಮೂಲಕ ಮೆರವಣಿಗೆ ಗ್ರಾಮದ ಎಲ್ಲಾ ಬೀದಿ ಬೀದಿಗಳಲ್ಲಿ ಸಂಚರಿಸಿ ನಂತರ ವೇದಿಕೆ ಕಾರ್ಯಕ್ರಮದಲ್ಲಿ ಸಂವಿಧಾನದ ಪ್ರಸ್ತಾವನೆಯನ್ನು ವಾಚಿಸುವಿಕೆ, ಸಂವಿಧಾನದ ಮಹತ್ವದ ಕುರಿತು ಉಪನ್ಯಾಸಕರಿಂದ ಉಪನ್ಯಾಸ, ಬೀದಿ ನಾಟಕಗಳ ಮೂಲಕ ಸಾಮಾಜಿಕ ಅರಿವು ಮೂಡಿಸುವ ಹಾಗೂ ಶಾಲಾ ವಿದ್ಯಾರ್ಥಿಗಳ ಹಲವಾರು ಸಂವಿಧಾನದ ಬಗ್ಗೆ ಪ್ರಬಂಧ ಸ್ಪರ್ಧೆ, ಚರ್ಚಾ ಸ್ಪರ್ಧೆ ಏರ್ಪಡಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಸಮಾಜ ಕಲ್ಯಾಣ ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ದ್ವಿಚಕ್ರ ವಾಹನ ರ್ಯಾಲಿ ಏರ್ಪಡಿಸಲಾಗಿತ್ತು.

ಹಾಗೂ ವಿದ್ಯಾರ್ಥಿಗಳಿಂದ ಕಾರ್ಯಕ್ರಮಗಳನ್ನು ಮಾಡಿಸಲಾಯಿತು. ತ್ರ

ಶಶಿಕಾಂತ ನಾಯಿಕರ ಕಾರ್ಯ ಸ್ಮರಣೀಯ: ಸಚಿವ ಸತೀಶ ಜಾರಕಿಹೋಳಿ

ಹುಕ್ಕೇರಿ : ತಮ್ಮ ತಾಯಿಯ ಸ್ಮರಣಾರ್ಥ ಮಾಜಿ ಸಚಿವ ಶಶಿಕಾಂತ ನಾಯಿಕ ಅವರು ಹೊಸೂರು ಗ್ರಾಮದಲ್ಲಿ ವಾಕ್ ಮತ್ತು ಶ್ರವಣ ತಪಾಸಣಾ ಶಿಬಿರ ಮತ್ತು ರಕ್ತದಾನ ಶಿಬಿರವನ್ನು ಏರ್ಪಡಿಸಿರುವುದು ಮಾದರಿ ಕಾರ್ಯವಾಗಿದೆ ಎಂದು ಲೋಕೊಪಯೋಗಿ ಸಚಿವ ಸತೀಷ ಜಾರಕಿಹೋಳಿ ಹೇಳಿದರು.

ಅವರು ಇಲ್ಲಿಗೆ ಸಮೀಪದ ಹೊಸೂರಿನಲ್ಲಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ, ರಾಷ್ಟ್ರೀಯ ಸೇವಾ ಯೋಜನಾ ಘಟಕ ಮತ್ತು ಹೊಸುರಿನ ಭಾರತೀಯ ರೂರಲ್ ಡೆವಲೆಪಮೆಂಟ್ ಫೌಂಡೇಶನ್ ಇವುಗಳ ಸಂಯುಕ್ತ ಆಶ್ರಯಲ್ಲಿ ಮಾಜಿ ಸಚಿವ ಶಶಿಕಾಂತ ನಾಯಿಕ ಅವರ ತಾಯಿ ಉಮಾತಾಯಿ ಅಕ್ಕಪ್ಪಾ ನಾಯಿಕ್ ಅವರ 6 ನೇ ಪುಣ್ಯಸ್ಮರಣೆ ನಿಮಿತ್ತ ಏರ್ಪಡಿಸಲಾಗಿದ್ದ ವಾಕ್ ಮತ್ತು ಶ್ರವಣ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಕಳೆದ ಒಂದು ವಾರದಿಂದ ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ 120 ಜನ ವಿದ್ಯಾರ್ಥಿಗಳು ಮತ್ತು ವೈದ್ಯರು ಬೆಳಗಾವಿ ಜಿಲ್ಲೆಯ 50 ಸಾವಿರ ಮನೆಗಳಿಗೆ ಹೋಗಿ ಶ್ರವಣ ಮತ್ತು ಮಾತು ಬಾರದವರ ಸಮೀಕ್ಷೆ ನಡೆಸಿ ಅವರನ್ನು ಶಿಬಿರಕ್ಕೆ ಕರೆದುಕೊಂಡು ಬಂದು ಚಿಕಿತ್ಸೆ ನೀಡುತ್ತಿರುವುದು ಶ್ಲಾಘನೀಯ. ಈ ಸೇವೆಯನ್ನು ಜಿಲ್ಲೆಯ ಎಲ್ಲ ತಾಲೂಕಾ ಕೇಂದ್ರಗಳಿಗೂ ಅವರು ವಿಸ್ತರಿಸಲಿ ಎಂದು ಕರೆ ನೀಡಿದರು.

ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ನಿರ್ದೆಶಕಿ ಪ್ರೊ.ಎಂ.ಪುಷ್ಪಾವತಿ ಮಾತನಾಡಿ, ಮಾತು ಬಾರದವರನ್ನು ಹಾಗೂ ಕಿವಿ ಕೇಳಿಸದವರನ್ನು ಸಮಾಜವು ಅಂಗವಿಕಲೆರೆಂದು ಭಾವಿಸಬಾರದು. ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಿದರೆ ಅವರು ಸರಳವಾಗಿ ಮಾತನಾಡಲು ಮತ್ತು ಕಿವಿ ಕೇಳಲು ಬರುತ್ತದೆ. ಕಿವಿಯ ಹಿಂದಿನ ನರ ದೌರ್ಬಲ್ಯದಿಂದ ಕಿವಿ ಕೇಳಿಸುವುದಿಲ್ಲ. ಇದಕ್ಕೆ ಸೂಕ್ತ ಸಾಧನವನ್ನು ಕಿವಿಗೆ ಅಳವಡಿಸಿಕೊಂಡರೆ ಕಿವಿಯು ಕೇಳಿಸುತ್ತದೆ ಎಂದರು.

ಸಾನಿಧ್ಯ ವಹಿಸಿದ್ದ ಹುಕ್ಕೇರಿ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನೆಯಲ್ಲಿನ ಹಿರಿಯರ ಸ್ಮರಣಾರ್ಥ ಪುಣ್ಯಸ್ಮರಣೆಗಳು ಕೇವಲ ಪೋಟೊ ಪೂಜೆಗೆ ಮಾತ್ರ ಸಮೀತವಾಗದೆ ಸಮಾಜಮುಖಿಯಾಗಿರಬೇಕು. ಅಂಥ ಕಾರ್ಯವನ್ನು ಮಾಜಿ ಸಚಿವ ಶಶಿಕಾಂತ ನಾಯಿಕ ಅವರು ಮಾಡುತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವ ಶಶಿಕಾಂತ ನಾಯಿಕ ಮಾತನಾಡಿ, ಸಮಾಜದಲ್ಲಿ ಇತ್ತಿಚೆಗೆ ಕಿವಿ ಕೇಳಿಸದವರ ಸಂಖ್ಯೆ ಹೆಚ್ಚುತ್ತಿದ್ದು ಇದನ್ನು ಗುರುತಿಸಿ ಶ್ರವಣ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಮಾಜಿ ಸಚಿವ ಎ.ಬಿ.ಪಾಟೀಲ, ಮಾಜಿ ಶಾಸಕ ಎಸ್.ಬಿ.ಘಾಟಗೆ, ತಹಶೀಲ್ದಾರ ಮಂಜುಳಾ ನಾಯಿಕ,ತಾಲೂಕಾ ವೈದ್ಯಾಧಿಕಾರಿ ಉದಯ ಕುಡಚಿ, ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಭಾವತಿ ಪಾಟೀಲ, ಸಿ.ಡಿ.ಪಿ.ಓ ಎಚ್. ಹೊಳೆಪ್ಪಾ, ಸಹಕಾರಿ ಧುರೀಣರಾದ ಸಂಜೀವ ಬಾನಿ, ಬಸಗೌಡ ಪಾಟೀಲ, ಅಮರನಾಥ ಮಹಾಜನಶೆಟ್ಟಿ, ಬಾಳಪ್ಪಾ ಅಕ್ಕತಂಗೇರಹಾಳ, ಎಲ್.ಎ.ಲಂಕೆನ್ನವರ, ಭೀಮಪ್ಪಾ ರಾಮಗೋನಟ್ಟಿ, ಆಶಿಯಾ ಮೋಕಾಶಿ, ಮಹಾಂತೇಶ ಮಗದುಂ, ಸದಾನಂದ ಕರಾಳೆ ಮುಂತಾದವರು ಉಪಸ್ಥಿತರಿದ್ದರು.

ಎಲ್.ಸಿ.ಕೊಟಬಾಗಿ ಸ್ವಾಗತಿಸಿದರು. ಭೀಮಾನಂದ ಮುದಕ್ಕನ್ನವರ ವಂದಿಸಿದರು. ಎಸ್.ಜಿ.ಬಡಿಗೇರ ನಿರೂಪಿಸಿದರು.

ಉಚಿತ ತಪಾಸಣೆ ಮತ್ತು ಜಾಗೃತಿ ಜಾಥಾ ಆಯೋಜನೆ

ಧಾರವಾಡ: ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ಫೆಬ್ರವರಿ 5 ರಂದು ಬೆಳಿಗ್ಗೆ 10 ಘಂಟೆಗೆ ಜಿಲ್ಲಾ ಪಂಚಾಯತ ಆವರಣದಿಂದ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮತ್ತು ಜಿಲ್ಲಾ ಆಸ್ಪತ್ರೆ, ತಾಲೂಕಾ ಆಸ್ಪತ್ರೆಗಳಲ್ಲಿ, ಎನ್ಸಿಡಿ ಕ್ಲೀನಿಕ್ಗಳಲ್ಲಿ ಉಚಿತ ತಪಾಸಣಾ ಶಿಬಿರಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಪಾಟೀಲ ಶಶಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಫೆಬ್ರುವರಿ 5 ರ ಜನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ. ಅವರು ಚಾಲನೆ ನೀಡಲಿದ್ದಾರೆ. ಆರೋಗ್ಯ ಇಲಾಖೆ ಸಿಬ್ಬಂದಿಗಳು, ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಜಾಗೃತಿ ಜಾಥಾ ಕಾರ್ಯಕ್ರಮವು ಜಿಲ್ಲಾ ಪಂಚಾಯತ ಆವರಣದಿಂದ ಪ್ರಾರಂಭಗೊಂಡು ಕೋರ್ಟ ಸರ್ಕಲ್ ಮಾರ್ಗವಾಗಿ ಆಲೂರ ವೆಂಕಟರಾವ್ ವೃತ (ಜುಬ್ಲಿ ಸರ್ಕಲ್)ದ ಮೂಲಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣದಲ್ಲಿ ಮುಕ್ತಾಯಗೊಳ್ಳಲಿದೆ.

ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ಜಿಲ್ಲಾ ಎನ್.ಸಿ.ಡಿ ಘಟಕ, ಜಿಲ್ಲಾ ಎನ್.ಸಿ.ಡಿ ಕ್ಲಿನಿಕ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಂಬಾಕು ವ್ಯಸನಮುಕ್ತ ಕೇಂದ್ರ, ಜಿಲ್ಲಾ ಆಸ್ಪತ್ರೆ ಧಾರವಾಡ ಹಾಗೂ ತಾಲೂಕಾ ಎನ್.ಸಿ.ಡಿ ಕ್ಲಿನಿಕ್, ಕಲಘಟಗಿ ಕುಂದಗೋಳ, ನವಲಗುಂದ ತಾಲೂಕಾ ಆಸ್ಪತ್ರೆಗಳಲ್ಲಿ ಫೆ.5 ರಂದು 30 ವರ್ಷ ಮೇಲ್ಪಟ್ಟವರಿಗೆ ಉಚಿತ ಮಧುಮೇಹ, ರಕ್ತದೊತ್ತಡ ಹಾಗೂ ಸಾಮಾನ್ಯ ಕ್ಯಾನ್ಸರ್ ತಪಾಸಣಾ ಶಿಬಿರವನ್ನು ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮದಡಿ ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ಈ ತಪಾಸಣಾ ಶಿಬಿರಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾಡಳಿತದಿಂದ ಜರುಗಿದ ಶ್ರೀ ಕಾಯಕ ಶರಣರ ಜಯಂತಿಯ ಸಿದ್ಧತಾ ಸಭೆ

ಧಾರವಾಡ: ಪ್ರತಿ ವರ್ಷದಂತೆ ಶ್ರೀ ಕಾಯಕ ಶರಣರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸುವ ಕುರಿತು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರ ಅಧ್ಯಕ್ಷತೆಯಲ್ಲಿ ಜಯಂತಿಯ ಪೂರ್ವ ಸಿದ್ಧತಾ ಸಭೆ ಜರುಗಿತು.

ಅವರು ಮಾತನಾಡಿ, ಫೆಬ್ರವರಿ 10 ರಂದು ಬೆಳಗ್ಗೆ 11 ಗಂಟೆಗೆ ಶ್ರೀ ಕಾಯಕ ಶರಣರ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಭಾಭವನದಲ್ಲಿ ಆಚರಿಸಲು ನಿರ್ಧರಿಸಲಾಗಿದೆ. ಕಾರ್ಯಕ್ರಮದಲ್ಲಿ ಸಾಮಾಜಿಕ ಸೇವೆಯನ್ನು ಸಲ್ಲಿಸಿದ ಸಮಾಜದ ಹಿರಿಯರಿಗೆ ಗೌರವಿಸಿ, ಸನ್ಮಾನಿಸಲಾಗುವುದು. ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಮುಖಂಡರಾದ ಸುನೀಲ್ ಮೋಹನ ಹೊಂಗಲ್, ದೈಷ್ ಸವಣೂರು, ರವಿ ಸಾಮ್ರಾಣಿ, ಪ್ರಲ್ಹಾದ್ ಸವಣೂರು, ದಯಾನಂದ್ ರತ್ನಾಕರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಪೋಷಕರ ನಿರಾಕರಣೆ: ನೇಣಿಗೆ ಶರಣಾದ ಪ್ರೇಮಿಗಳು

ಕಲಬುರಗಿ: ಅಣ್ಣ–ತಂಗಿ ವರಸೆಯ ಪ್ರೀತಿಗೆ ಪೋಷಕರು ನಿರಾಕರಿಸಿದ ಹಿನ್ನೆಲೆ ಪ್ರೇಮಿಗಳಿಬ್ಬರು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಜಿಲ್ಲೆಯ ಯಡ್ರಾಮಿ ತಾಲೂಕಿನ ಮಾಗಣಗೇರೆ ಗ್ರಾಮದಲ್ಲಿ ನಡೆದಿದೆ.

ಶಶಿಕಲಾ (20) ಗೊಲ್ಲಾಳಪ್ಪ (24) ನೇಣಿಗೆ ಶರಣಾದ ಪ್ರೇಮಿಗಳು. ಶಶಿಕಲಾ ಮತ್ತು ಗೊಲ್ಲಾಳಪ್ಪ ಇಬ್ಬರು ಕೂಡ ವರಸೆಯಲ್ಲಿ ಅಣ್ಣ ತಂಗಿ ಆಗಿದ್ದರು. ಅದರಿಂದ ಎರಡೂ ಮನೆಯವರು ಅಣ್ಣ–ತಂಗಿ ಪ್ರೀತಿಗೆ ನಿರಾಕರಿಸಿದ್ದಾರೆ.

ಗೊಲ್ಲಾಳಪ್ಪ ಪ್ರೀತಿಯನ್ನು ನಿರಾಕರಿಸಿ ಶಶಿಕಲಾಗೆ ಬೇರೆ ಮದುವೆ ಮಾಡಲು ಕುಟುಂಬಸ್ಥರು ಮುಂದಾಗಿದ್ದರು. ಅದರಂತೆ ವಿಜಯಪುರ ಜಿಲ್ಲೆಯ ಸಿಂಧಗಿ ಗ್ರಾಮದ ಯುವಕನ ಜೊತೆ ನಿಶ್ಚಿತಾರ್ಥ ಮಾಡಿಸಿದ್ದರು.

ಮುಂದಿನ ತಿಂಗಳು ಮದುವೆ ಕೂಡ ನಿಶ್ಚಯವಾಗಿತ್ತು ಎನ್ನಲಾಗಿದೆ.

ಪ್ರೇಯಸಿಗೆ ಮದುವೆ ನಿಶ್ಚಯ ಆಗಿರುವ ವಿಷಯ ತಿಳಿದ ಗೊಲ್ಲಾಳಪ್ಪ ನಿನ್ನೆ ರಾತ್ರಿ ಶಶಿಕಲಾಳನ್ನು ಮನೆಯಿಂದ ಕರೆದುಕೊಂಡು ಹೋಗಿದ್ದಾನೆ. ನಂತರ ಮಾಗಣಪುರ ಗ್ರಾಮದ ದೇವಸ್ಥಾನದಲ್ಲಿ ಜೋಡಿ ಮದುವೆ ಮಾಡಿಕೊಂಡಿದ್ದಾರೆ.

ಬಳಿಕ ಅದೇ ಗ್ರಾಮದ ಹೊರವಾಲಯದ ತೋಟದ ಜಮೀನಿನಲ್ಲಿ ಇಬ್ಬರು ನೇಣಿಗೆ ಶರಣಾಗಿದ್ದಾರೆ. ಪ್ರೇಮಿಗಳಿಬ್ಬರು ನೇಣಿಗೆ ಶರಣಾಗುವ ಮುನ್ನ ತಾವು ಮದುವೆ ಮಾಡಿಕೊಂಡಿರುವುದರ ಬಗ್ಗೆ ಸೆಲ್ಫಿ ಫೋಟೋ ತೆಗೆದು ಆತ್ಮಹತ್ಯೆಗೆ ಶರಣಾಗಿದ್ದಾರೆ. ಯಡ್ರಾಮಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಬೆಳಗಾವಿ: ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಬಿದ್ದ ಪಿಡಿಓ

ಬೆಳಗಾವಿ: ಗ್ರಾಮ ಪಂಚಾಯತಿಯಲ್ಲಿ ಇ–ಸ್ವತ್ತು ನೀಡಲು ಲಂಚಕ್ಕೆ ಬೇಡಿಕೆ ಇಟ್ಟು, ಹಣ ಪಡೆಯುತ್ತಿದ್ದ ಗ್ರಾಪಂ ಅಭಿವೃದ್ಧಿ ಅಧಿಕಾರಿ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿರುವ ಘಟನೆ ರಾಯಬಾಗ ತಾಲೂಕಿನ ನಿಡಗುಂದಿ ಗ್ರಾಮದಲ್ಲಿ ನಡೆದಿದೆ.

ರಾಯಬಾಗ ತಾಲೂಕಿನ ನಿಡಗುಂದಿ ಗ್ರಾಮ ಪಂಚಾಯತಿ ಪಿಡಿಓ ಸದಾಶಿವ ಜಯಪ್ಪ ಕರಗಾರ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿ. ನಾಗರಾಳ ಗ್ರಾಮದ ಗಂಗವ್ವ ಹಣಮಂತ ಕೆಂಗನ್ನವರ ಹಸರಿನಲ್ಲಿರುವ ರಿ.ಸ.ನಂ 1/2 ನಿಡಗುಂದಿ ಗ್ರಾಪಂ ವಿಪಿಸಿ ನಂ 146/1 ಮನೆಗೆ ಸಂಬಂಧಿಸಿದ ಇ–ಸ್ವತ್ತು ಆಸ್ತಿ ನಮೂನೆ 9 ಮತ್ತು 11 ನೀಡಲು 5 ಸಾವಿರ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದಾನೆ. ಈ ಹಿನ್ನೆಲೆಯಲ್ಲಿ ಗಂಗವ್ವ ಕೆಂಗನ್ನವರ ಪುತ್ರ ಅಪ್ಪಾಸಾಬ, ಅಪ್ಪಣ್ಣಾ ಹಣಮಂತ ಕೆಂಗನ್ನವರ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಿಕೊಂಡ ಲೋಕಾಯುಕ್ತ ಅಧಿಕಾರಿಗಳು ರಾಯಬಾಗ ಪಟ್ಟಣದ ಸತ್ಯಗೌಡ ಭೈರಪ್ಪ ಕಿತ್ತೂರೆ ಇವರ ಮನೆಯಲ್ಲಿ ದೂರುದಾರ ಅಪ್ಪಾಸಾಬ ಕೆಂಗನ್ನವರ ಬಳಿಯಿಂದ ಲಂಚದ ಹಣವನ್ನು ಸ್ವೀಕರಿಸುವ ವೇಳೆ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ದಾಳಿ ನಡೆಸಿ, ಬಂಧಿಸಿದ್ದಾರೆ.

ನರೇಗಾ ಕಾರ್ಮಿಕರು ಆರೋಗ್ಯ ಕಾಪಾಡಿಕೊಳ್ಳಿರಿ: ಲಕ್ಷ್ಮೀನಾರಾಯಣ

ಕೋಟ ಗ್ರಾಪಂ ವ್ಯಾಪ್ತಿಯಲ್ಲಿ ಉಚಿತ ಆರೋಗ್ಯ ತಪಾಸಣೆ

ಹುಕ್ಕೇರಿ: ಉದ್ಯೋಗ ಖಾತರಿ ಯೋಜನೆಯ ಕೂಲಿ ಕಾರ್ಮಿಕರು ಆರೋಗ್ಯದತ್ತ ಹೆಚ್ಚಿನ ಗಮನಹರಿಸಬೇಕು ಎಂದು ನರೇಗಾ ಸಹಾಯಕ ನಿರ್ದೇಶಕ ಪಿ.ಲಕ್ಷ್ಮೀನಾರಾಯಣ ಕಿವಿಮಾತು ಹೇಳಿದರು.

ತಾಲೂಕಿನ ಕೋಟ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಶನಿವಾರ ಮಹಾತ್ಮಾ ಗಾಂಧಿ ನರೇಗಾ ದಿವಸ ಅಂಗವಾಗಿ ಕಾರ್ಮಿಕರಿಗೆ ಏರ್ಪಡಿಸಿದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ನರೇಗಾ ಕಾರ್ಮಿಕರು ಕುಟುಂಬದ ನಿರ್ವಹಣೆಯೊಂದಿಗೆ ಆರೋಗ್ಯವನ್ನು ಸದೃಢವಾಗಿ ಕಾಪಾಡಿಕೊಳ್ಳಬೇಕು ಎಂದರು.

ನರೇಗಾ ಯೋಜನೆಯಡಿ ಮಹಿಳೆ ಮತ್ತು ಪುರುಷರಿಗೆ ಸಮಾನ ಕೂಲಿ ನೀಡಲಾಗುವುದು. ಸಮುದಾಯ ಕಾಮಗಾರಿಗಳ ಜೊತೆಗೆ ವೈಯಕ್ತಿಕ ಕಾಮಗಾರಿಗಳಾದ ಬದು ನಿರ್ಮಾಣ, ಜಮೀನ ಸಮತಟ್ಟು, ದನಗಳ ಶೆಡ್, ಸೋಕ್ ಪಿಟ್, ತೋಟಗಾರಿಕೆ ಬೆಳಗಳು, ರೇಷ್ಮೆ ಬೆಳೆ, ಮುಂತಾದ ಕಾಮಗಾರಿಗಳನ್ನು ಕೈಕೊಳ್ಳಲು ಅವಕಾಶವಿದೆ ಎಂದು ಅವರು ಹೇಳಿದರು.

ತಾಂತ್ರಿಕ ಸಂಯೋಜಕ ಅರ್ಷದ ನೇರ್ಲಿ ಮಾತನಾಡಿ, 3 ವರ್ಷದ ಒಳಗಿನ ಮಕ್ಕಳ ಆರೈಕೆಗಾಗಿ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಕೂಸಿನ ಮನೆ ತೆರೆಯಲಾಗಿದೆ.

ತಮ್ಮ ಮಕ್ಕಳನ್ನು ಕೂಸಿನ ಮನೆಯಲ್ಲಿ ಬಿಟ್ಟು ತಮ್ಮ ಕೆಲಸ ಮುಗಿದ ನಂತರ ತಮ್ಮ ಮಕ್ಕಳನ್ನು ಕರೆದುಕೊಂಡು ಹೋಗಬಹುದು.

ಕೂಸಿನ ಮನೆಗಳಲ್ಲಿ ಮಕ್ಕಳನ್ನು ನೋಡಿಕೊಳ್ಳಲು ಆರೈಕೆದಾರರಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಅಲ್ಲದೆ ಮಕ್ಕಳಿಗೆ ಬೇಕಾದ ಪೌಷ್ಟಿಕ ಆಹಾರ ಒದಗಿಸಲಾಗುತ್ತಿದೆ ಎಂದರು.

ಪಿಡಿಒ ಶಿವಾನಂದ ವಾಸನ್ನವರ ಶಿಬಿರ ಉದ್ಘಾಟಿಸಿದರು. ಗ್ರಾಪಂ ಅಧ್ಯಕ್ಷೆ ನಾಯಿಕ ಅಧ್ಯಕ್ಷತೆ ವಹಿಸಿದ್ದರು. ಎಂಐಎಸ್ ಸಂಯೋಜಕ ಶಂಕರ ಶಿರಗುಪ್ಪಿ, ಐಇಸಿ ಸಂಯೋಜಕ ಮಹಾಂತೇಶ ಬಾದವಾನಮಠ, ಆಡಳಿತ ಸಹಾಯಕಿ ಪ್ರೀತಿ ಜವಳಿ, ತಾಂತ್ರಿಕ ಸಹಾಯಕರಾದ ಸುವರ್ಣಾ ಅಗಸರ, ಪುಷ್ಪಾ ಹೊಸೂರ, ವಿಶ್ವನಾಥ ಜಗದಾಳ, ಮದನ್ನವರ, ಕಿರಣ ಕಮತೆ, ಭೈರನಾಥ ಪಾಟೀಲ, ದೇವನಗೌಡ ಪಾಟೀಲ, ಸಾಗರ ಪಾಟೀಲ, ಬಸವರಾಜ ಸೊಪ್ಪಡ್ಲ, ಅಮರ ಕಾಕತಿಕರ, ಡಿಇಒ ರವಿ ಕುಂಬಾರ, ಗ್ರಾಮ ಕಾಯಕ ಮಿತ್ರ ಆಶಾ ಭಾಮನೆ ಮತ್ತಿತರರು ಉಪಸ್ಥಿತರಿದ್ದರು. ಇದೇ ವೇಳೆ ಕೇಕ್ ಕತ್ತರಿಸುವ ಮೂಲಕ ನರೇಗಾ ದಿವಸ ಕಾರ್ಮಿಕರೊಂದಿಗೆ ಆಚರಣೆ ಮಾಡಲಾಯಿತು.

ಮಂದಿರದಲ್ಲಿ ಜಾತಿಯ ತಾರತಮ್ಯ ಆಗುತ್ತಿದೆ: ಈಶ್ವರಾನಂದಪುರಿ ಶ್ರೀ ಬೇಸರ

ಚಿತ್ರದುರ್ಗ: ಜಾತಿ ಕಾರಣಕ್ಕೆ ಬಾಗೂರು ಗ್ರಾಮದ ಚನ್ನಕೇಶವ ದೇಗುಲದಲ್ಲಿ ನಮಗೂ ಗರ್ಭಗುಡಿ ಪ್ರವೇಶಕ್ಕೆ ಬಿಡಲಿಲ್ಲ. ನಾವು ದೇಗುಲಕ್ಕೆ ಹೋಗಿದ್ದೆವೆಂಬ ಕಾರಣಕ್ಕೆ ದೇವಾಲಯ ಸ್ವಚ್ಛಗೊಳಿಸಿದ್ದಾರೆ ಎಂದು ಸಾಣೇಹಳ್ಳಿಯಲ್ಲಿ ಕನಕ ಪೀಠದ ಈಶ್ವರಾನಂದಪುರಿ ಶ್ರೀ ಬೇಸರ ವ್ಯಕ್ತಪಡಿಸಿದ್ದಾರೆ.

ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲೂಕಿನ ಸಾಣೇಹಳ್ಳಿ ಗ್ರಾಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಅಂತರ್ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಶುಕ್ರವಾರ ನಡೆದ ಪರಿವರ್ತನೆಯ ಹಾದಿಯಲ್ಲಿ ಮಠಗಳು ಗೋಷ್ಠಿಯಲ್ಲಿ ಈಶ್ವರಾನಂದಪುರಿ ಶ್ರೀ ಬೇಸರ ವ್ಯಕ್ತಪಡಿಸಿದ್ದಾರೆ.

ಕುರುಬರ ಸ್ವಾಮೀಜಿ ಒಳಗೆ ಬಂದರೆಂಬ ಕಾರಣಕ್ಕೆ ಸ್ವಚ್ಛತೆ ಮಾಡಿದ್ದಾರೆ. ನಾವು ಹೋಗಿದ್ದಕ್ಕಾಗಿ ದೇಗುಲ ಸ್ವಚ್ಛವಾಯಿತೆಂದು ವ್ಯಂಗ್ಯವಾಡಿದ್ದಾರೆ. ಇನ್ನು ಮುಂದೆ ಚನ್ನಕೇಶವ ದೇಗುಲಕ್ಕೆ ನಾವು ಹೋಗಲ್ಲ. ಮುಜರಾಯಿ ದೇಗುಲ ಎಂದು ಗೊತ್ತಿದ್ದರೆ ಪ್ರತಿಭಟನೆ ಮಾಡುತ್ತಿದ್ದೆವು. ಉಡುಪಿಯಲ್ಲಿ ಕನಕದಾಸರು ಪ್ರತಿಭಟಿಸಿದಂತೆ ಪ್ರತಿಭಟಿಸುತ್ತಿದ್ದೆವು. ಆಗ ನಮಗೆ ಮುಜರಾಯಿ ದೇಗುಲ ಎಂಬುದು ತಿಳಿದಿರಲಿಲ್ಲ. ವೈಕುಂಠ ಏಕಾದಶಿಗೆ ಹೋದಾಗ ನರಕ ತೋರಿಸಿಬಿಟ್ಟರು. ಪೂಜಾರಿ ಹೆಣ್ಣು ಮಕ್ಕಳಿಗೆಲ್ಲಾ ಗರ್ಭಗುಡಿಗೆ ಬಿಟ್ಟರು. ಮಠಾಧೀಶರಾದ ನಮಗೇ ಗರ್ಭಗುಡಿಯ ಒಳಗೆ ಬಿಡಲಿಲ್ಲ ಎಂದು ಕನಕ ಪೀಠದ ಈಶ್ವರಾನಂದಪುರಿ ಶ್ರೀ ಜಾತಿಯಿಂದ ಅನುಭವಿಸಿದ ಕಹಿ ಘಟನೆಯನ್ನು ನೆನಪಿಸಿಕೊಂಡರು.

ಗೋಷ್ಠಿಯಲ್ಲಿ ಸಾಣೇಹಳ್ಳಿ ತರಳಬಾಳು ಮಠದ ಡಾ.ಪಂಡಿತಾರಾಧ್

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗೆ ಕ್ಷೇತ್ರದ ಜನತೆಯಿಂದ ಕೃತಜ್ಞತೆಯ ಹೃದಯಸ್ಪರ್ಶಿ ಸನ್ಮಾನ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಕೆರೆ ತುಂಬಿಸುವ ಬೃಹತ್ ಯೋಜನೆ ಮಂಜೂರು ಮಾಡಿಸಿಕೊಂಡು ಬಂದಿರುವ ಹಿನ್ನೆಲೆಯಲ್ಲಿ ಕ್ಷೇತ್ರದ ಜನರು ಶನಿವಾರ ತಮ್ಮ ಕ್ಷೇತ್ರದ ಶಾಸಕರೂ ಆಗಿರುವ, ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಕೃತಜ್ಞತೆಯಿಂದ ಹೃದಯಸ್ಪರ್ಶಿ ಸನ್ಮಾನ ನೆರವೇರಿಸಿದರು.

ಲಕ್ಷ್ಮೀ ಹೆಬ್ಬಾಳಕರ್ ಅವರ ಗೃಹಕಚೇರಿಗೆ ಆಗಮಿಸಿದ ವಿವಿಧ ಗ್ರಾಮಗಳ ಸಾವಿರಾರು ಜನರು ಹೆಬ್ಬಾಳಕರ್ ಅವರನ್ನು ಸನ್ಮಾನಿಸಿ, ನಿಮ್ಮಿಂದಾಗಿ ಗ್ರಾಮೀಣ ಕ್ಷೇತ್ರದ ಚಿತ್ರಣವೇ ಬದಲಾಗಿದೆ.

ಇತಿಹಾಸದಲ್ಲೇ ಎಂದೂ ಕಾಣದ ಅಭಿವೃದ್ಧಿ ಕಾಣುತ್ತಿದ್ದೇವೆ. ಈಗ ಸಚಿವರಾದ ನಂತರ ಅಭಿವೃದ್ಧಿಗೆ ಇನ್ನಷ್ಟು ವೇಗ ಸಿಕ್ಕಿದೆ. ನೀವು ಮುಂದೆ ಹೋಗಿ, ನಾವು ನಿಮ್ಮ ಜೊತೆಗಿದ್ದೇವೆ ಎಂದು ಭರವಸೆಯ ಹಾರೈಕೆ ಮಾಡಿದರು.

ಈ ವೇಳೆ ಮಾತನಾಡಿದ ಎಪಿಎಂಸಿ ಮಾಜಿ ಅಧ್ಯಕ್ಷ ಯುವರಾಜ ಕದಂ, ಇಂತಹ ದೊಡ್ಡ ಕೆಲಸ ತಂದಿರುವ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಕೃತಜ್ಞತೆ ಸಲ್ಲಿಸುವ ಸಲುವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಸಚಿವರು ಕ್ಷೇತ್ರಕ್ಕೆ ಸಾವಿರಾರು ಕೋಟಿ ರೂ ಯೋಜನೆ ತಂದಿದ್ದಾರೆ. ಅವರ ಇಚ್ಛಾಶಕ್ತಿಯೇ ಇದಕ್ಕೆ ಕಾರಣವಾಗಿದೆ. ಈಗ ಕೆರೆ ತುಂಬಿಸುವುದಕ್ಕಾಗಿಯೇ 810 ಕೋಟಿ ರೂ ಯೋಜನೆ ಮಂಜೂರು ಮಾಡಿಸಿದ್ದಾರೆ. ಇನ್ನೂ ಹಲವಾರು ಯೋಜನೆಗಳನ್ನು ಹಾಕಿಕೊಂಡಿದ್ದಾರೆ. ಇದರಿಂದ ಗ್ರಾಮೀಣ ಪ್ರದೇಶದ ಜನರಿಗೆ ಬಹಳ ದೊಡ್ಡ ಉಪಕಾರವಾಗಿದೆ ಎಂದರು.

ನೀವು ಮುಂದೆ ರಾಜ್ಯದ ಮೊದಲ ಮಹಿಳಾ ಮುಖ್ಯಮಂತ್ರಿಯಾಗಿ. ನಿಮ್ಮ ಜೊತೆಗೆ ನಾವಿದ್ದೇವೆ.

ಬರಲಿರುವ ಲೋಕಸಭಾ ಚುನಾವಣೆಯಲ್ಲಿ ಮೃಣಾಲ ಹೆಬ್ಬಾಳಕರ್ ಅವರಿಗೆ ಟಿಕೆಟ್ ನೀಡಬೇಕು. ಇದರಿಂದ ಅಭಿವೃದ್ಧಿಗೆ ಇನ್ನಷ್ಟು ವೇಗ ಸಿಗಲಿದೆ ಎಂದೂ ಅವರು ಹೇಳಿದರು.

ಮುಖಂಡ ಮಲ್ಲೇಶ ಚೌಗಲೆ ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್ ಅವರು ಶಾಸಕರಾದ ನಂತರ ಬೆಳಗಾವಿ ಗ್ರಾಮೀಣ ಕ್ಷೇತ್ರದ ಚಿತ್ರಣವೇ ಬದಲಾಗಿದೆ. ನಿರಂತರ ಅಭಿವೃದ್ಧಿಯಾಗುತ್ತಿದೆ.



ಸಚಿವರಾದ ನಂತರ ಅಭಿವೃದ್ಧಿಗೆ ಇನ್ನಷ್ಟು ವೇಗ ಬಂದಿದೆ ಎಂದರು. ಬರಲಿರುವ ಲೋಕಸಭಾ ಚುನಾವಣೆಯಲ್ಲಿ ಮೃಣಾಲ ಹೆಬ್ಬಾಳಕರ್ ಅವರನ್ನು ಕಣಕ್ಕಿಳಿಸಬೇಕು ಎಂದು ಆಗ್ರಹಿಸಿದರು.

ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್ ಮಾತನಾಡಿ, ಬಿಜೆಪಿಯ ಭ್ರಷ್ಟಾಚಾರದಿಂದ ಬೇಸತ್ತ ಜನರು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಕಾಂಗ್ರೆಸ್ ಸರಕಾರ ಜನರಿಗೆ ನೀಡಿದ್ದ ಭರವಸೆಯನ್ನು ಈಡೇರಿಸಿದೆ. ಲಕ್ಷ್ಮೀ ಹೆಬ್ಬಾಳಕರ್ ಅವರು ಕ್ಷೇತ್ರಕ್ಕೆ ಸಾವಿರಾರು ಕೋಟಿ ರೂ ಯೋಜನೆ ತಂದಿದ್ದಾರೆ.

ಈಗ ಬಂದಿರುವ ಕೆರೆ ತುಂಬುವ ಯೋಜನೆ ವಿಶೇಷವಾಗಿದ್ದು, ಗ್ರಾಮೀಣ ಭಾಗದ ಇತಿಹಾಸದಲ್ಲೇ ಇಂತಹ ಯೋಜನೆ ಬಂದಿರಲಿಲ್ಲ. ನಿಮ್ಮ ಸಹಕಾರ ನಿರಂತರ ಇರಲಿ ಎಂದು ಕೋರಿದರು.

ಸನ್ಮಾನಕ್ಕೆ ಪ್ರತಿಕ್ರಿಯಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ನಿನ್ನೆ ಯುವರಾಜ ಕದಂ ಅವರು ನಮ್ಮ ಸ್ವಪ್ನ ಸಾಕಾರವಾಗಿದೆ, ನಿಮಗೆ ಕೃತಕೃತೆ ಸಲ್ಲಿಸಲು ಬರುತ್ತಿದ್ದೇವೆ ಎಂದರು. ನಾನು ನನಗೆ ಸನ್ಮಾನ ಬೇಡ, ಜನರಿಗೆ ನಾನು ಕೃತಜ್ಞತೆ ಸಲ್ಲಿಸಬೇಕು ಎಂದು ಹೇಳಿದೆ.

ಆದರೆ ಇಂದು ಇಷ್ಟು ದೊಡ್ಡ ಸಂಖ್ಯೆಯಲ್ಲಿ ಇಲ್ಲಿಗೆ ನೀವೆಲ್ಲ ಬಂದಿದ್ದೀರಿ. ನಮ್ಮೆಲ್ಲರ ಸಹಕಾರದಿಂದ ನಾನು ಮಂತ್ರಿಯಾಗಿದ್ದೇನೆ. ನಿಮಗೆ ನೀಡಿದ್ದ ಆಶ್ವಾಸನೆಗಳನ್ನು ಈಡೇರಿಸುವ ಅವಕಾಶ ಸಿಕ್ಕಿದೆ. ಹಾಗಾಗಿ ನಾನು ನಿಮಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಮುಂದಿನ ದಿನಗಳಲ್ಲಿ ಇಡೀ ರಾಜ್ಯದಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರವನ್ನು ಮಾದರಿ ಮಾಡಬೇಕಾಗಿದೆ. ಗೃಹಲಕ್ಷ್ಮೀ ಯೋಜನೆ ಸಮರ್ಪಕ ಜಾರಿ ನಂತರ ಅಭಿವೃದ್ಧಿ ಯೋಜನೆಗಳನ್ನು ಆರಂಭಿಸಲಾಗಿದೆ. ಈಗಾಗಲೆ ಸಾಕಷ್ಟು ಯೋಜನೆ ಮಂಜೂರಾಗಿದ್ದು ಅವುಗಳ ಟೆಂಡರ್ ಪ್ರಕ್ರಿಯೆ ನಡೆದು ಕೆಲಸ ಆರಂಭವಾಗಬೇಕಿದೆ. ನಮಗೆ ಜನರಲ್ಲಿ ಗೌರವ, ದೇವರಲ್ಲಿ ಭಕ್ತಿ ಇದೆ. ಕೇವಲ ಮಂದಿರವಲ್ಲ, ರಾಮರಾಜ್ಯವಾಗಬೇಕೆನ್ನುವ ಕನಸು ನಮ್ಮದು. ನೋಟು ಅಮಾನ್ಯೀಕರಣ, ಜಿಎಸ್ ಟಿ, ಕೊರೋನ, ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆ ಇವುಗಳಿಂದ ಜನರನ್ನು ರಕ್ಷಿಸಲು ಪಂಚ ಗ್ಯಾರಂಟಿ ಯೋಜನೆ ಜಾರಿಗೊಳಿಸಲಾಗಿದೆ. ಪಂಚ ಗ್ಯಾರಂಟಿ ಘೋಷಣೆ ಮಾಡಿದ್ದಷ್ಟೇ ಅಲ್ಲ, ಕೇಂದ್ರ ಸರಕಾರದ ಸಹಕಾರವಿಲ್ಲದೆ ಸಮರ್ಪಕವಾಗಿ ಜಾರಿಗೊಳಿಸಲಾಗಿದೆ ಎಂದೂ ಅವರು ತಿಳಿಸಿದರು.

ನಿಮ್ಮೆಲ್ಲರ ವಿಶ್ವಾಸ ನಮ್ಮ ಮೇಲಿದೆ. ನಾನು ರಾಜ್ಯದ ಎಲ್ಲೇ ಇದ್ದರೂ ಬೆಳಗಾವಿ ಗ್ರಾಮೀಣ ಕ್ಷೇತ್ರದ ಯೋಚನೆಯಲ್ಲೇ ಇರುತ್ತೇನೆ. ನಿರಂತರ ದೂರವಾಣಿ ಸಂಪರ್ಕ ಮಾಡುತ್ತ ಕ್ಷೇತ್ರದ ಸಮಸ್ಯೆಗೆ ಸದಾ ಸ್ಪಂದಿಸುತ್ತಿರುತ್ತೇನೆ ಎಂದ ಅವರು, ಮೃಣಾಲ ಹೆಬ್ಬಾಳಕರ್ ಅವರನ್ನು ಲೋಕಸಭೆಗೆ ನಿಲ್ಲಿಸಬೇಕೆಂದು ನೀವೆಲ್ಲ ಆಗ್ರಹಿಸಿದ್ದೀರಿ. ಅವನ ಹಣೆ ಬರಹ ಏನಿದೆ ಗೊತ್ತಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರು, ಪಕ್ಷದ ಹೈಕಮಾಂಡ್ ಈ ಕುರಿತು ನಿರ್ಧರಿಸುತ್ತದೆ. ಪಕ್ಷದಿಂದ ಯಾರಿಗೇ ಟಿಕೆಟ್ ನೀಡಿದರೂ ಅವರನ್ನು ಗೆಲ್ಲಿಸಲು ನಿಮ್ಮ ಸಹಕಾರ ಇರಲಿ ಎಂದು ವಿನಂತಿಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಯುವರಾಜ ಕದಂ, ಮಲ್ಲೇಶ ಚೌಗಲೆ, ಮನು ಬೆಳಗಾಂವಕರ್, ಸಾತೇರಿ ಬೆಳವಟ್ಕರ್, ಬಾಳು ದೇಸೂರಕರ್, ಕಲ್ಲಪ್ಪ ಕಡೋಲ್ಕರ್, ಪದ್ಮರಾಜ ಪಾಟೀಲ, ಪುಂಡಲೀಕ ಬಾಂದುರ್ಗೆ, ಅಮೋಲ್ ಬಾತಖಾಂಡೆ, ಅಶೋಕ ಚೌಗಲೆ, ಎಸ್.ಎಲ್.ಚೌಗಲೆ, ಯಲ್ಲಪ್ಪ ಕಲಕಾಮ್ಕರ್, ವಿಠ್ಠಲ ದೇಸಾಯಿ, ಗಜಾನನ ಕಾಕತ್ಕರ್, ಅಶೋಕ ಕಾಂಬ್ಳೆ, ರಘು ಖಾಂಡೇಕರ್, ಅರವಿಂದ ಪಾಟೀಲ, ಸಿದ್ದಪ್ಪ ಭತ್ತಿ, ಮಾರುತಿ ಡುಕರೆ, ಮಲ್ಲಪ್ಪ ಲೋಕೂರ್, ಜಿ.ಕೆ.ಪಾಟೀಲ, ರಘುನಾಥ ಪಾಟೀಲ ಮೊದಲಾದವರು ಇದ್ದರು.

ಅಕ್ಕಿ ಹಾಗೂ ಸಿರಿಧಾನ್ಯಗಳ ಪ್ರದರ್ಶನ ಮತ್ತು ಮಾರಾಟ

ಬೆಳಗಾವಿ: ಎಸ್. ಕೆ. ಇ. ಸಂಸ್ಥೆಯ ರಾಣಿ ಪಾರ್ವತಿದೇವಿ ಮಹಾವಿದ್ಯಾಲಯದ ಯುಥ್ ರೆಡ್ ಕ್ರಾಸ್ ವತಿಯಿಂದ ಕಾಲೇಜಿನ ಆವರಣದಲ್ಲಿ ಇದೇ ದಿನಾಂಕ 6-2-2024 ಮಂಗಳವಾರದಂದು ವಿವಿಧ ತಳಿಯ ಅಕ್ಕಿ ಹಾಗೂ ಸಿರಿಧಾನ್ಯಗಳನ್ನು (ಸಾವಯವ) ಮಾರಾಟಕ್ಕೆ ಇಡಲಾಗುವದು.

ಸಾವಯವ ಕೃಷಿಕರಾದ ಶ್ರೀ ಶಂಕರ ಲಂಗಟಿಯವರು ಇದನ್ನು ಏರ್ಪಡಿಸುವರು. ಸಂಪೂರ್ಣ ಸಾವಯವ ಕೃಷಿಯಿಂದ ತಯಾರಿಸಿದ, ಯಾವುದೇ ಫಾಲೀಶ್ ಇಲ್ಲದ ಅಕ್ಕಿ ಹಾಗೂ ಧಾನ್ಯಗಳ ಮಾರಾಟ ನಡೆಯುವದು. ನಾಗರಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಕಾಲೇಜಿನ ಪ್ರಾಚಾರ್ಯರು ತಿಳಿಸಿದ್ದಾರೆ.

ಚಿಕ್ಕೋಡಿಯ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದ ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ಚಿಕ್ಕೋಡಿ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಬೆಳಗಾವಿ ಚಿಕ್ಕೋಡಿ ತಾಲೂಕಿಗೆ ದಿಢೀರ ವಿವಿಧ ಇಲಾಖೆಗೆ ಭೇಟಿ ನೀಡಿದರು. ತಾಲೂಕಿನ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ಸಿಬ್ಬಂದಿಗಳ ಹಾಜರಾತಿಯನ್ನು ಪರಿಶೀಲಿಸಿ ಸಾರ್ವಜನಿಕರ ಕುಂದುಕೊರತೆಗಳನ್ನು ವಿಚಾರಿಸಿ ಆಸ್ಪತ್ರೆಯ ಸ್ವಚ್ಚತೆ ಬಗ್ಗೆ ಗಮನಹರಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಭೇಟಿ ನೀಡಿ ತಾಲೂಕಿನಲ್ಲಿ ನೀರಿನ ಸಮಸ್ಯೆ ಬರದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು. ಪಂಚಾಯತ ರಾಜ್ಯ ಇಂಜಿನೀಯರಿಂಗ ವಿಭಾಗ ಇಲಾಖೆಗೆ ಭೇಟಿ ನೀಡಿ ಸಿಬ್ಬಂದಿಗಳ ಜೊತೆ ಕಾಮಗಾರಿಗಳ ಕುರಿತು ಚರ್ಚಿಸಿದರು.

ಚಿಕ್ಕೋಡಿ ತಾಲೂಕಿನ ನೀರಿನ ಗುಣಮಟ್ಟ ಪರೀಕ್ಷೆ ಪ್ರಯೋಗಾಲಯಕ್ಕೆ ಭೇಟಿ ನೀಡಿದರು. ನಂತರ ಸಾಮರ್ಥ್ಯಸೌಧ ಕಟ್ಟಡವನ್ನು ಆದಷ್ಟು ಬೇಗ

ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ತಾಲೂಕಿನ ಎಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದರು.

ಲೋಕಾಯುಕ್ತ ಜನ ಸಂಪರ್ಕ ಸಭೆ ಫೆ.14 ರಂದು

ಬೆಳಗಾವಿ: ಜಿಲ್ಲೆಯ ಮೂಡಲಗಿ ತಾಲೂಕಿನ ತಹಶೀಲ್ದಾರ ಕಛೇರಿ ಸಭಾಭವನದಲ್ಲಿ ಫೆ.14 ರಂದು ಬೆಳಗ್ಗೆ 11 ಗಂಟೆಯಿಂದ 2 ಗಂಟೆಯವರೆಗೆ ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಮೂಡಲಗಿ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳ ಸಮಕ್ಷಮದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ನಡೆಸಲಿದ್ದಾರೆ.

ಸರ್ಕಾರಿ ಕಛೇರಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ಸಲ್ಲಿಸಿದಲ್ಲಿ, ಸ್ಥಳದಲ್ಲಿಯೇ ಅಧಿಕಾರಿಗಳಿಂದ ಪರಿಹರಿಸಿಕೊಳ್ಳಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವವರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜರಿರಲು ತಿಳಿಸಲಾಗಿದೆ.

ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ, ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ, ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ 0831-2950756 ಅಥವಾ 0831-2421922 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉತ್ತಮ ಪರಿಸರಕ್ಕಾಗಿ ಘನತ್ಯಾಜ್ಯ ನಿರ್ವಹಣೆ ಅಗತ್ಯ

ಬೆಳಗಾವಿ: ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ ಇಲಾಖೆ ಕರ್ನಾಟಕ ಸರ್ಕಾರ ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಮತ್ತು ಗ್ರಾಮ ಪಂಚಾಯಿತಿ ಬೋರಗಲ್ಲ ಸಹಯೋಗದಲ್ಲಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಬೋರಗಲ್ಲ ಗ್ರಾಮದ ಶ್ರೀ ಹನುಮಾನ್ ದೇವಸ್ಥಾನದಲ್ಲಿ ಸ್ವಸಹಾಯ ಸಂಘಗಳ ಸದಸ್ಯರಿಗೆ ಗ್ರಾಮ ಪಂಚಾಯತ್ ಸದಸ್ಯರಿಗೆ ನವೀಕರಿಸಬಹುದಾದ ಇಂಧನ, ಮಳೆ ನೀರು ಕೊಯ್ಲು ಹಾಗೂ

ಘನ ತ್ಯಾಜ್ಯ ನಿರ್ವಹಣೆ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು . ಈ ಕಾರ್ಯಕ್ರಮದ ಉದ್ಘಾಟಕರಾಗಿ ಶ್ರೀ ಭೀಮಪ್ಪ ಅಲಗರಾಹುತ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಬೋರಗಲ್ಲ ಆಗಮಿಸಿ ದೀಪ ಪ್ರಜ್ವಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ಒಂದು ದಿನದ ಅರಿವಿನ ಕಾರ್ಯಕ್ರಮದ ಸದುಪಯೋಗವನ್ನು ಎಲ್ಲರೂ ಪಡೆದುಕೊಂಡು

ಘನ ತ್ಯಾಜ್ಯ ನಿರ್ವಹಣೆ ಮಾಡಿದರೆ ನಮ್ಮ ಅರೋಗ್ಯ ಮತ್ತು ಪರಿಸರ ಉತ್ತಮವಾಗಿರುತ್ತದೆ ಎಂದು ಹೇಳಿದರು.ಕಾರ್ಯಕ್ರಮದ ಅಧ್ಯಕ್ಷರಾಗಿ ಪಂಚಾಯತ ಅಧ್ಯಕ್ಷರು ಬೋರಗಲ್ಲ ಶ್ರೀಮತಿ ರೇಣುಕಾ ಮಾನೆ, ಆಗಮಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಎಂ.ಎಂ, ಗಡಗಲಿ ತಾಜ್ಯ ಎಂದರೆ ವಸ್ತುಗಳನ್ನು

ಉಪಯೋಗಿಸಿ ಬೇಡವಾದ ಮೇಲೆ ಎಸೆಯುವುದು ಹಾಗೂ ತಾಜ್ಯದಲ್ಲಿ 5 ವಿಧಗಳು 1) ಹಸಿ ತ್ಯಾಜ್ಯ2) ಒಣ ತ್ಯಾಜ್ಯ 3) ಹಾನಿಕರ ತ್ಯಾಜ್ಯ 4) ಎಲೆಕ್ಟ್ರಾನಿಕ್ ತ್ಯಾಜ್ಯ 5)ಆಸ್ಪತ್ರೆ ತ್ಯಾಜ್ಯ ಈ 5 ತ್ಯಾಜ್ಯಗಳನ್ನು ಸರಿಯಾಗಿ ವಿಂಗಡಿಸಬೇಕು ಏಕೆಂದರೆ ಹಸಿ ತ್ಯಾಜ್ಯ ಗೊಬ್ಬರವಾಗುತ್ತದೆ. ಒಣ ತ್ಯಾಜ್ಯ ಮರುಬಳಕೆಯಾಗುತ್ತದೆ. ಇನ್ನುಳಿದ ತ್ಯಾಜ್ಯಗಳನ್ನು ಸಂಸ್ಕರಿಸಿ ವೈಜ್ಞಾನಿಕವಾಗಿ ಸುಟ್ಟು ಹಾಕಬಹುದು. ಅದಕ್ಕಾಗಿ ನಾವೆಲ್ಲರೂ ಸ್ವಚ್ಛ ಮತ್ತು ಸುರಕ್ಷಿತ ಪರಿಸರಕ್ಕಾಗಿ ಹೆಜ್ಜೆ ಹಾಕೋಣ ಎಂದರು . ಇನ್ನೋರ್ವ ಸಂಪನ್ಮೂಲ ವ್ಯಕ್ತಿ ಕು ಸುಗಂಧಾ ಶಂಕರ ಅಳ್ಳಟ್ಟಿ ಸಂವಹನ ಕೌಶಲ್ಯ ಎಂದರೆ ಒಬ್ಬ ವ್ಯಕ್ತಿ ಇನ್ನೊಬ್ಬ ವ್ಯಕ್ತಿಗೆ ಪರಿಣಾಮಕಾರಿಯಾಗಿ ಮಾಹಿತಿಯನ್ನು ನೀಡುವುದು. ಹಾಗೂ ಸಂವಹನವನ್ನು ಹಾಡಿನ , ಮಾತಿನ , ಸಾಮಾಜಿಕ ಜಾಲತಾನ, ಸನ್ನೆ, ದೃಶ್ಯಗಳ, ಚಿತ್ರಗಳ ಮೂಲಕ ನಡೆಸಬಹುದು ಎಂದು ತಿಳಿಸಿದರು, ಹಾಗೂ ನಾಯಕತ್ವ ಕೌಶಲ್ಯ ಎಂದರೆ ಕ್ರಿಯೆ, ಪ್ರಕ್ರಿಯೆ ಅಥವಾ ಪ್ರಯತ್ನದಲ್ಲಿ ತಂಡವನ್ನು , ಸಂಸ್ಥೆಯನ್ನು, ದೇಶವನ್ನು ಅಥವಾ ರಾಜ್ಯವನ್ನು ಮುನ್ನಡಿಸುವ ವ್ಯಕ್ತಿ ಆಗಿರುತ್ತಾನೆ ಎಂದು ಮಾಹಿತಿ ನೀಡಿದರು . ಸಂಪನ್ಮೂಲ ವ್ಯಕ್ತಿ ಶ್ರೀ ಬಸವರಾಜ ಮಣ್ಣಿಕೇರಿ ನವೀಕರಿಸಬಹುದಾದ ಇಂಧನದ ಉಪಯೋಗಗಳು ಮತ್ತು ಮಹತ್ವವನ್ನು ಉಪಯೋಗಗಳು ಮತ್ತು ಮಹತ್ವವನ್ನು ವಿವರಿಸಿದರು.

ಗ್ರಾಮ ಪಂಚಾಯತ ಉಪಾಧ್ಯಕ್ಷ ಶ್ರೀ ಪ್ರದೀಪ್ ಸುಕದೇವ್ ಕಾಮಿನಿ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಬಿ ಬಿ ಅಲಗತ್ ರಾವುತ ಕಾರ್ಯದರ್ಶಿ ಶ್ರೀ ಐತವಾಡೆ , ಡಾಟಾ ಎಂಟ್ರಿ ಆಪರೇಟರ್ ಶ್ರೀ ದಿಲೀಪ್ ಅರ್ಜುನ್ ಕಾಂಬಳೆ , ಶ್ರೀ ಸಂದೀಪ್ ಶಂಕರ್ ನೇರಲಿ ಮತ್ತು ಗ್ರಾಮ ಪಂಚಾಯಿತಿ ಸದಸ್ಯರು, ಸ್ವ ಸಹಾಯ ಸಂಘದ ಅಧ್ಯಕ್ಷ ಶ್ರೀಮತಿ ಸುಜಾತ ದುರ್ಗಾಪ್ಪಾಗೋಲ ಮತ್ತು ಒಕ್ಕೂಟದ ಪದಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಅಂಗನವಾಡಿ ಕಾರ್ಯಕರ್ತೆಯರು, ಶ್ರೀ ಬಿ ಎಲ್ ಕೋಣಿ ಉಪಸ್ಥಿತರಿದ್ದರು. ಕಾರ್ಯಕ್ರಮವ ಶ್ರೀಮತಿ ಶಶಿಕಲಾ ದುರದುಂಡಿ ರೋಗಿ ನಿರೂಪಿಸಿ ಸ್ವಾಗತಿಸಿ ವಂದಿಸಿದರು.

ಹುಬ್ಬಳ್ಳಿಯ ಪೃಥ್ವಿ ಬಿಲ್ಡರ್ಗೆ ದಂಡ ವಿಧಿಸಿ, ಪರಿಹಾರ ನೀಡಲು ಆದೇಶ

ಧಾರವಾಡ: ಹುಬ್ಬಳ್ಳಿಯ ಪೃಥ್ವಿ ಬಿಲ್ಡರ್ ಹಾಗೂ ಡೆವಲಪರ್ಸ ಪಾಲುದಾರರಾದ ಶಿವನಗೌಡ ಪಾಟೀಲ ಎಂಬುವವರು ಇಟಗಟ್ಟಿ ಗ್ರಾಮದಲ್ಲಿ ಅಭಿವೃದ್ಧಿ ಪಡಿಸುತ್ತಿದ್ದ ಇಟಗಟ್ಟಿ ಲೇಔಟನಲ್ಲಿ, ಹುಬ್ಬಳ್ಳಿಯ ಅಧ್ಯಾಪಕ ನಗರ ನಿವಾಸಿ ನಾಗರತ್ನ ಮುಂಡರಗಿ ಮತ್ತು ಧಾರವಾಡದ ಸತ್ತೂರ ನಿವಾಸಿ ಮೋಹನ ಡೊಂಬರ ಎಂಬುವವರು ಸೈಟ್ ಪಡೆದುಕೊಳ್ಳಲು ಇಚ್ಛಿಸಿ ಪೃಥ್ವಿ ಡವಲಪರ್ಸರೊತೆ ಪ್ಲಾಟ ನಂ.9, 10 ಮತ್ತು 11ರ ಬಗ್ಗೆ ಮಾರಾಟದ ಒಪ್ಪಂದ ಮಾಡಿಕೊಂಡು, ಒಂದೊಂದು ಸೈಟಿಗೆ ರೂ.5,63,600/- ರೂಪಾಯಿ ಹಣ ಸಂದಾಯ ಮಾಡಿದ್ದರು.

ಸಾಕಷ್ಟು ಕಾಲಾವಕಾಶ ಕಳೆದರೂ ಬಿಲ್ಡರ ಲೇಔಟ್ ನಿರ್ಮಾಣ ಮಾಡದೇ, ತಮಗೆ ಬುಕ್ ಮಾ